ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಗುರುವಾರ: 12–03–2026

EMAIL : dairyadadaari@gmail.com ಸಂಪುಟ: 01 ಸಂಚಿಕೆ: 88

ಬೆಲೆ ರೂ : 2.00

ರಾಯಚೂರು

ಪುಟ: 4



**SEHRI & IFTARI TIME**

DAY :THURSDAY

RAMZAN : 22

DATE: 12.03.2026

END TIME OF SEHRI :5:17 AM

FAJAR AZAAN : 5:22 AM

IFTAR TIME : 6:32 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ಮೂರು ತಿಂಗಳೊಳಗಾಗಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ನೇಮಕ : ಲಕ್ಷ್ಮಿ ಹೆಬ್ಬಾಳ್ಕರ್

**ಬೆಂಗಳೂರು, ಮಾ.11–** ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕೀಯರ ಹುದ್ದೆಗಳನ್ನು 90 ದಿನಗಳ ಒಳಗಾಗಿ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿಂದು ಪ್ರಶ್ನೋತ್ತರದ ಅವಧಿಯಲ್ಲಿ ಗುರ್ಮೆ ಸುರೇಶ್‌ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಡವರ ಮಕ್ಕಳು ಓದುವ ಅಂಗನವಾಡಿ ಕೇಂದ್ರಗಳಲ್ಲಿ ಉತ್ತಮ ವಾತಾವರಣ ಇರಬೇಕು ಎಂಬುದು ಸರ್ಕಾರದ ಬದ್ಧತೆ. ಈ ನಿಟ್ಟಿನಲ್ಲಿ ಎಲ್ಲಿಯೂ ಹುದ್ದೆಗಳನ್ನು ಖಾಲಿ ಬಿಡಲು ಅವಕಾಶ ನೀಡುತ್ತಿಲ್ಲ ಎಂದರು.

ತೆರವಾದ ಹುದ್ದೆಗಳಿಗೆ ಸ್ಥಳೀಯವಾಗಿಯೇ 12 ಜನ ಸದಸ್ಯರು ಇರುವ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಲಿದೆ. 90 ದಿನಗಳಲ್ಲಿ ಅದು ಮುಗಿಯಬೇಕು ಎಂದು ಹೇಳಿದರು.



ಅಂಗನವಾಡಿ ಕಾರ್ಯಕರ್ತರು ಆಯಾ ಗ್ರಾಮಗಳಲ್ಲೇ ವಾಸವಿರಬೇಕು ಎಂಬುದನ್ನು ಕಡ್ಡಾಯವಾಗಿ ಜಾರಿಗೊಳಿಸುತ್ತಿರುವುದಾಗಿ ತಿಳಿಸಿದರು. ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿ, ಉದ್ಯೋಗಿನಿ ಯೋಜನೆಯ ಬಗ್ಗೆ ಪ್ರಶ್ನೆ ಕೇಳಿದಾಗ ಉತ್ತರ ನೀಡಿದ ಸಚಿವರು, ಉದ್ಯೋಗಿನಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಶಾಸಕರ ನೇತೃತ್ವದಲ್ಲಿ ಸಮಿತಿಗಳಿರುತ್ತವೆ. ಶಾಸಕರು ಫಲಾನುಭವಿಗಳ ಆಯ್ಕೆ ಪಟ್ಟಿ ನೀಡುವಲ್ಲಿ ವಿಳಂಬ ಮಾಡುತ್ತಿದ್ದಾರೆ.

ಅನಂತರ ಅದನ್ನು ಬ್ಯಾಂಕುಗಳಿಗೆ ಕಳುಹಿಸಿದರೆ ಅಲ್ಲಿ ಎಂಟರಿಂದ ಒಂಬತ್ತು ತಿಂಗಳು ವಿಳಂಬವಾಗುತ್ತಿದೆ.
ಸಿಬಿಲ್ ಸ್ಕೋರ್ ಆಧರಿಸಿ ಬ್ಯಾಂಕುಗಳು ಸಾಲ ನೀಡುವ ಪರಿಪಾಠ ಅನುಸರಿಸಿವೆ. ಗ್ರಾಮೀಣ ಭಾಗದಲ್ಲಿ ಮಹಿಳೆಯರಿಗೆ ಸಿಬಿಲ್ ಸ್ಕೋರ್ ಲೆಕ್ಕ ಹಾಕುವುದು ಕಷ್ಟ ಸಾಧ್ಯ ಗಳನ್ನು ಸರಳೀಕರಣ ಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

# ಜೋಳ ಖರೀದಿ ಕೇಂದ್ರಗಳಲ್ಲಿ ನಕಲಿ ನೊಂದಾಣಿ ಮಾಡುತ್ತಿರುವವರ ಮೇಲೆ ಕ್ರಮಕ್ಕೆ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಾಹಶಿಲ್ದಾರ್ ಕಚೇರಿಯಲ್ಲಿ ಭಾರತೀಯ ಜನತಾ ಪಾರ್ಟಿ ರೈತಮೋರ್ಚ ತಾಲೂಕು ಘಟಕ ವತಿಯಿಂದ ತಹಶೀಲ್ದಾರ್ ರವರಿಗೆ ಉಪತಹಶಿಲ್ದಾರ್ ವಿನಾಯಕರಾವ್ ರವರ ಮೂಲಕ ಮನವಿ ಸಲ್ಲಿಸಿ ಬಿಜೆಪಿ. ಜಿಲ್ಲಾ ರೈತಮೋರ್ಚ ಅಧ್ಯಕ್ಷರಾದ ದೊರೆಬಾಬು ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರಕಾರಗಳು ಜೋಳ ಬೆಳೆದ ರೈತರಿಂದ ಬೆಂಬಲ ಬೇಲೆ ಯೋಜನೆಯಡಿಯಲ್ಲಿ ಜೋಳವನ್ನು ಖರೀದಿ ಮಾಡುವುದಕ್ಕೆ ತಾಲೂಕಿನಲ್ಲಿ ಜೋಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಿ ರೈತರಿಂದ ಜೋಳವನ್ನು ಖರೀದಿಸುವುದಕ್ಕೆ ನೊಂದಾಣಿಯನ್ನು ಪ್ರಾರಂಭಿಸಲಾಗಿದು. ಜೋಳ ನೊಂದಣಿ ಕೇಂದ್ರದಲ್ಲಿ ಜೋಳವನ್ನು ಬೆಳೆಯದೆ ಇರುವ ರೈತರ ಹೆಸರಿನಲ್ಲಿ ಕೇಲವರು ಖರೀದಿ ಕೇಂದ್ರಗಳಲ್ಲಿ ನೊಂದಾಯಿಸಿಕೊಂಡು ಬೇರೆ ರಾಜ್ಯಗಳಿಂದ ಜೋಳ ಖರಿದಿಸಿ ಬೆಂಬಲ ಬೆಲೆಯಡಿಯಲ್ಲಿ ಜೋಳವನ್ನು ಮಾರಾಟಮಾ ಡುವುದಕ್ಕೆ ಮುಂದಾಗಿರುವುದರಿಂದ ಸಣ್ಣ ಮತ್ತು ಅತಿ ಸಣ್ಣ ಜೋಳ ಬೆಳೆದ ರೈರಿಗೆ ಅನ್ಯಾಯವಾಗುತ್ತಿದೆ. ಅದರಿಂದ ತಾವುಗಳು ಸರಿಯಾಗಿ ಪರಿಶೀಲಿಸಿ ಜೋಳ ಬೆಳೆದ ಫಲಾನುಭವಿ ರೈತರಿಗೆ ಯೋಜನೆಯ ಲಾಭ ದೊರೆಯುವಂತೆ ಮಾಡಬೇಕು ಎಂದು ಒತ್ತಾಯಿಸಿದರು.

ಭಾರತೀಯ ಜನತಾ ಪಾರ್ಟಿ ರೈತಮೋರ್ಚ ತಾಲೂಕು ಘಟಕದ ಅಧ್ಯಕ್ಷರಾದ ರುದ್ರಗೌಡ ಮದ್ಲಾಪುರ್, ಮುಖಂಡರಾದ ಜೆ.ಸುಧಾಕರ್, ಗುರುಸಿದ್ದಪ್ಪ ಕಣ್ಣೂರು, ಶರಣಯ್ಯಸ್ವಾಮಿ ಕಾತರಕಿ, ಶಿವಲಿಂಗಯ್ಯಸ್ವಾಮಿ, ಕುಮಾರಸ್ವಾಮಿ ಮೇದಾ, ರವಿಕುಮಾರ,ಉಮಾಪತಿ ನಾಯಕ,ದೊಡ್ಡಣ್ಣ ಹೂಗಾರ, ಗೋಪಾಲ ಇಭ್ರಮಪುರ್, ರಾಯಪ್ಪ ವಕೀಲರು,ಬಸವರಾಜ ನಕ್ಕುಂದಿ, ಅಮರೇಶನಾಯಕ ಸೇರಿದಂತೆ ಇನ್ನಿತರರು ಇದ್ದರು

# ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳ ಖಾತೆಗೆ ಶೀಘ್ರ ಹಣ ಜಮೆ

ಧೈರ್ಯದ ದಾರಿ

**ರಾಯಚೂರು ಮಾ,11–** 2025–26ನೇ ಸಾಲಿನಲ್ಲಿ ಗೃಹಲಕ್ಷ್ಮೀ ಯೋಜನೆಯ ಒಂಬತ್ತನೇ ಕಂತಿನ ಅನುದಾನದಲ್ಲಿ ಜಿಲ್ಲೆಯ 4,06,897 ಫಲಾನುಭವಿಗಳಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ರಾಯಚೂರು ಇವರ ಮೂಲಕ 87,58,76,000 ರೂ. ಡಿಬಿಟಿ ಪ್ರಕ್ರಿಯೆ ಚಾಲ್ತಿ ಮಾಡಲಾಗಿದ್ದು, ಮುಂದಿನ ಎರಡು ಮೂರು ದಿನಗಳಲ್ಲಿ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಲಿದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ದೇವಿಪುರ ಗ್ರಾಮದಲ್ಲಿ ಶ್ರೀ ದ್ಯಾವಮ್ಮದೇವಿ ಮಹಾರಥೋತ್ಸವ

ಧೈರ್ಯದ ದಾರಿ

**ಮಾನ್ವಿ:** ತಾಲ್ಲೂಕಿನ ದೇವಿಪುರ ಗ್ರಾಮದ ಗ್ರಾಮ ದೇವತೆಯರಾದ ಶ್ರೀ ದ್ಯಾವಮ್ಮದೇವಿ ಹಾಗೂ ಚೌಡಮ್ಮದೇವಿಯರ ಜಾತ್ರ ಮಹೋತ್ಸವ ಅಂಗವಾಗಿ ಬುದುವಾರ ಬೆಳಿಗ್ಗೆ ಶ್ರೀ ದ್ಯಾವಮ್ಮ ದೇವಿ ಮತ್ತು ಶ್ರೀ ಚೌಡಮ್ಮ ದೇವಿರ ಉತ್ಸವ ಮೂರ್ತಿಗಳನ್ನು ಪಲ್ಲಕ್ಕಿಯಲ್ಲಿಟ್ಟು ಹತ್ತಿರದ ತುಂಗಾ ನದಿಯಲ್ಲಿ ಗಂಗೆ ಪೂಜೆ ಸಲ್ಲಿಸಿ ನಂತರ ಮೂರ್ತಿಯನ್ನು ಪಲ್ಲಕ್ಕಿಯಲ್ಲಿಟ್ಟು, ಸುಮಂಗಲಿಯರು ಗ್ರಾಮದ ಪ್ರಮುಖ ಬೀದಿಯಲ್ಲಿ ಕುಂಭಗಳನ್ನು ಹೋತ್ತು,ವಾದ್ಯ ಮೇಳದೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ದೇವಸ್ಥಾನಕ್ಕೆ ಆಗಮಿಸಿ ಪೂಜೆ ಸಲ್ಲಿಸಿದರು. ಸಂಜೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಮಹಾರಥೋತ್ಸವ, ಸಿಡಿ ಬಂಡಿ ಉತ್ಸವ ನೆರವೇರಿತು.

ಗ್ರಾಮ ದೇವತೆಯರಾದ ಶ್ರೀ ದ್ಯಾವಮ್ಮದೇವಿ ಹಾಗೂ ಚೌಡಮ್ಮದೇವಿಯರಿಗೆ ಜಾತ್ರ ಮಹೋತ್ಸವದ ಅಂಗವಾಗಿ ವಿಶೇಷ ಹೂವಿನ ಅಲಂಕಾರವನ್ನು ಮಾಡಲಾಯಿತು, ಮಹಿಳೆಯರು ದೇವಿಗೆ ಹಸಿರು ಬಳೆ, ಸೀರೆ ಮತ್ತು ಕುಂಕುಮವನ್ನು ಅರ್ಪಿಸುವ ಮೂಲಕ ತಮ್ಮ ಹರಕೆಯನ್ನು ತಿರಿಸಿದರು. ರಾಜ್ಯ ಸೇರಿದಂತೆ ವಿವಿಧ ಜಿಲ್ಲೆಗಳ ಸಾವಿರಾರು ಭಕ್ತರು ಆಗಮಿಸಿದ್ದರು



### ಮನೆ ಪಟ್ಟಿ, ವಸತಿ ಗಣಿತ ಕ್ಷೇತ್ರ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ

# ಜನಗಣತಿ ಕಾರ್ಯ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ಧೈರ್ಯದ ದಾರಿ

**ರಾಯಚೂರು ಮಾ,11–** ದೇಶದಲ್ಲಿ ಪ್ರಥಮ ಬಾರಿಗೆ ಸಂಪೂರ್ಣ ಡಿಜಿಟಲ್ ರೀತಿಯಲ್ಲಿ ಜನಗಣತಿ ನಡೆಯಲಿದ್ದು, ಕಾರ್ಯಕ್ಕೆ ನೇಮಿಸಲ್ಪಡುವ ಅಧಿಕಾರಿಗಳು ಮತ್ತು ಸಹಾಯಕ ಅಧಿಕಾರಿಗಳು ಈ ಜನಗಣತಿ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಮಾರ್ಚ್ 11ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮನೆ ಪಟ್ಟಿ ಮತ್ತು ವಸತಿ ಗಣಿತ ಕುರಿತು ಕ್ಷೇತ್ರ ಮಟ್ಟದ ತರಬೇತಿಗಾರರಿಗೆ 3 ದಿನಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜನಗಣಿತಿಯಲ್ಲಿ ಸ್ವಯಂ ಗಣತಿಯ ಆಯ್ಕೆಯೂ ಲಭ್ಯವಿದೆ. ಮೊದಲ ಹಂತದಲ್ಲಿ ಏ.16ರಿಂದ 30 ದಿನಗಳ ಕಾಲ ಮನೆ ಪಟ್ಟಿ ಕಾರ್ಯ ನಡೆಯಲಿದೆ. 2ನೇ ಹಂತದಲ್ಲಿ ಜನಸಂಖ್ಯಾ ಎಣಿಕೆ ಕಾರ್ಯ 2027ರ ಫೆಬ್ರವರಿಯಲ್ಲಿ ನಡೆಯಲಿದ್ದು, ಜಿಲ್ಲೆಯಲ್ಲಿ ಪರಿಣಾ ಮಕಾರಿಯಾಗಿ ಅನುಷ್ಠಾನ ಮಾಡಬೇಕೆಂದು ಅಧಿಕಾರಿ ಗಳಿಗೆ ಸೂಚಿಸಿದರು. ಜಿಲ್ಲೆಯ ಲ್ಲಿ ಜನಗಣತಿ–2027 ಪ್ರಕ್ರಿಯೆಯ ಪೂರ್ವ ಸಿದ್ಧತೆಗಳು ಆರಂಭಗೊಳ್ಳುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳು ಈ ಜನಗಣತಿ ಪ್ರಕ್ರಿಯೆಗೆ ಅವಶ್ಯವಿರುವ ಅಗತ್ಯ ನಕ್ಷೆಗಳು, ನಮೂನೆಗಳನ್ನು ತಯಾರು ಮಾಡುವುದು ಸೇರಿದಂತೆ ಎಲ್ಲ ಪೂರ್ವ ತಯಾರಿ ಮಾಡಿಕೊಳ್ಳಬೇಕು. ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ಜನಗಣತಿ ಕರ್ತವ್ಯ ನಿರ್ವಹಿಸಬೇಕು. ನೋಡಲ್ ಅಧಿಕಾರಿಗಳು ಹಿರಿಯ ಅಧಿಕಾರಿಗಳ ಜತೆ ಸಮನ್ವಯ ಸಾಧಿಸಿಕೊಂಡು ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಸೂಚನೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಉಪಸ್ಥಿತರಿದ್ದ ಮಾಸ್ಟರ್ ಟ್ರೇನರ್ ಸದಾಶಿವಪ್ಪ ಅವರು ಮಾತನಾಡಿ, 2011ರಲ್ಲಿ ಜನಗಣತಿಯು ಹಳೆಯ ಮ್ಯಾನುವೆಲ್ ಪದ್ಧತಿಯಲ್ಲಿ ನಡೆದಿತ್ತು. ಆದರೆ, ಈ ಬಾರಿ ಮೊಬೈಲ್ ಅಪ್ ಮೂಲಕ ಡಿಜಿಟಲ್ ಮೋಡ್‌ನಲ್ಲಿ ನಡೆಯಲಿದೆ. ಡಿಜಿಟಲ್ ಮೋಡ್‌ನಲ್ಲಿ ನಡೆಯುವ ಜನಗಣತಿಯು ನಿಖರತೆ ಹಾಗೂ ಪಾರದರ್ಶಕತೆಯಿಂದ ಕೂಡಿರಲಿದೆ. ಇದರಿಂದ ಸರ್ಕಾರಿ

ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಲು ಸಾಧ್ಯವಾಗಲಿದೆ



ಎಂದು ತಿಳಿಸಿದರು.2027ರ ಜನಗಣತಿ ಎರಡು ಹಂತಗಳಲ್ಲಿ ನಡೆಯಲಿದ್ದು, ಇದಕ್ಕೆ ಪೂರ್ವಭಾವಿಯಾಗಿ ಮೊದಲ ಹಂತದಲ್ಲಿ ಕರ್ನಾಟಕದಲ್ಲಿ ಮನೆಪಟ್ಟಿ ಕಾರ್ಯಾಚರಣೆ 2026ರ ಏ.16ರಿಂದ ಮೇ.15ರ ವರೆಗೆ ಒಂದು ತಿಂಗಳ ಕಾಲ ನಡೆಯಲಿದೆ. ಈ ಮೂವತ್ತು ದಿನಗಳ ಮನೆಪಟ್ಟಿ ಕಾರ್ಯ ಪ್ರಾರಂಭವಾಗುವ ಹದಿನೈದು ದಿನಗಳ ಮೊದಲು ಸ್ವಯಂ ಗಣತಿಯ ಆಯ್ಕೆ ಲಭ್ಯವಿರುತ್ತದೆ. ಎರಡನೇ ಹಂತದ ಜನಗಣತಿ 2027ರ ಫೆಬ್ರುವರಿಯಿಂದ ಆರಂಭವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಜನಗಣಿತಿಯ ಜಿಲ್ಲಾ ನೋಡಲ್ ಅಧಿಕಾರಿ ಸುದರ್ಶನ, ಮಾಸ್ಟರ್ ಟ್ರೈನಿಗಳಾದ ಮಲ್ಲೇಶ ನಾಯಕ, ಮಧು ಸೇರಿದಂತೆ ಇತರರು ಇದ್ದರು. ಜಿಲ್ಲಾಧಿಕಾರಿಗಳ ಕಚೇರಿಯ ಸಾಮಾಜಿಕ ಭದ್ರತೆ ಮತ್ತು ಪಿಂಚಣಿಯ ಸಹಾಯಕ ನಿರ್ದೇಶಕರಾದ ಬಸವರಾಜ ನಾಗರಬೆಂಚಿ ಸ್ವಾಗತಿಸಿದರು. ವನಿತಾ ಅವರು ಕಾರ್ಯಕ್ರಮ ನಿರೂಪಿಸಿದರು.

# ಲಿಂಗಸುಗೂರಿನ ಜಿಟಿಟಿಸಿ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಮಾ,11–** ಜಿಲ್ಲೆಯ ಲಿಂಗಸುಗೂರಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು (ಜಿಟಿಟಿಸಿ) ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಸ್ವಾಯತ್ತ ಸಂಸ್ಥೆಯಾಗಿದ್ದು, ಇಲ್ಲಿ ವಿವಿಧ ವಿಭಾಗದ ವಿಷಯಗಳನ್ನು ಬೋಧಿಸಲು ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಿಇ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಎಂಜಿನಿಯರಿಂಗ್ 01 ಹುದ್ದೆ, ಬಿ.ಇ ಇನ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ 01 ಹುದ್ದೆ, ಎಂಟೆಕ್ ಇನ್ ಮೆಕ್ಯಾನಿಕಲ್ ಎಂಜಿನಿಯರಿಂಗ್ 01 ಹುದ್ದೆ, ಎಂಟೆಕ್ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಎಂಜಿನಿಯರಿಂಗ್ 01 ಹುದ್ದೆಗೆ 01 ವರ್ಷದ ಬೋಧನೆ ಅಥವಾ ಕೈಗಾರಿಕಾ ಅನುಭವವನ್ನು ಅಭ್ಯರ್ಥಿಗಳು ಹೊಂದಿರಬೇಕು.

ಆಸಕ್ತರು ಸ್ವ–ವಿವರವನ್ನು ಕಾಲೇಜಿನ ಇಮೇಲ್ ಐಡಿ: gtte.lingasugur@gmail.com ಗೆ ಕಳಿಸಿ, 2026ರ ಮಾರ್ಚ್ 16ರಿಂದ ಮಾರ್ಚ್18ರವರೆಗೆ ನಡೆಯುವ ಸಂದರ್ಶನದಲ್ಲಿ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಲಿಂಗಸುಗೂರಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವನ್ನು ಕಚೇರಿಯ ಸಮಯದಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ. ಅಥವಾ ಮೊಬೈಲ್ ಸಂಖ್ಯೆ: 8548038965ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಪ್ರಾಂಶುಪಾಲರಾದ ಪ್ರತೀಬಾ ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

ಧೈರ್ಯದ ದಾರಿ

**ರಾಯಚೂರು ಮಾ,11–** ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2022–23 ಮತ್ತು 2023–24ನೇ ಸಾಲಿಗೆ ಜಿಲ್ಲೆಯ ಸಿರವಾರ ತಾಲ್ಲೂಕಿನ ಅಂಗನವಾಡಿ ಕೇಂದ್ರ ಸಂಖ್ಯೆ 12 ಹಾಗೂ ಅತ್ತನೂರು ಅಂಗನವಾಡಿ ಕೇಂದ್ರ ಸಂಖ್ಯೆ 5ರಲ್ಲಿ ಅಂಗನವಾಡಿ ಕಂ ಕ್ರಷ್ ಕೇಂದ್ರಗಳ ಕಾರ್ಯಕರ್ತೆ ಮತ್ತು ಸಹಾಯಕಿ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಕರ್ತೆ ಹುದ್ದೆಗೆ 5.500 ರೂ. ಮತ್ತು ಸಹಾಯಕಿ ಹುದ್ದೆಗೆ 3,000 ರೂ. ಗೌರವಧನ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಸ್ಥಳೀಯ ಅಂಗನವಾಡಿ ಕಂ ಕ್ರಷ್ ಕೇಂದ್ರದ ಸರ್ವೆ ವ್ಯಾಪ್ತಿಯಲ್ಲಿ ವಾಸವಾಗಿರಬೇಕು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಸಂಬಂಧ ಪಟ್ಟ ಅಂಗನವಾಡಿ ಕೇಂದ್ರದ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯಿಂದ ಸರ್ವೆ ವ್ಯಾಪ್ತಿಯಲ್ಲಿರುವ ಬಗ್ಗೆ ದೃಢೀಕರಣ ಪಡೆದು ಸಲ್ಲಿಸಬೇಕು. ಅಭ್ಯರ್ಥಿಯು ಮಹಿಳೆ ಆಗಿರಬೇಕು. ಕರ್ನಾಟಕ ರಾಜ್ಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ದ್ವಿತೀಯ ಪಿಯುಸಿಯಲ್ಲಿ ತೇರ್ಗಡೆ ಆಗಿರಬೇಕು. ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಈ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷ ಮಂಡಳಿ ನಡೆಸುವ 10 ನೇ ತರಗತಿಯಲ್ಲಿ ತೇರ್ಗಡೆ ಆಗಿರುವವರನ್ನು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವವರನ್ನು ಪರಿಗಣಿಸಬಹುದಾಗಿದೆ.

ವಯೋಮಿತಿ, ಅರ್ಜಿ ಸಲ್ಲಿಸಲು ನೇಮಕಾತಿ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಕನಿಷ್ಠ 18 ವರ್ಷ ಪೂರ್ಣಗೊಂಡಿರಬೇಕು. ಮತ್ತು ಗರಿಷ್ಠ 35 ವರ್ಷ ಮೀರಿರಬಾರದು. ವಿಧವೆಯರು ಮತ್ತು ಅಂಗವಿಕಲರಿಗೆ 10 ವರ್ಷ ವಯೋಮಿತಿಯಲ್ಲಿ ರಿಯಾಯಿತಿ ಇರುತ್ತದೆ. ಅಭ್ಯರ್ಥಿಯು 10ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ಅಥವಾ ಕನ್ನಡವನ್ನು ಒಂದು ಭಾಷಾ ವಿಷಯವಾಗಿ ಓದಿರಬೇಕು. ಅಪೇಕ್ಷಿತ ವಿದ್ಯಾರ್ಹತೆ: ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ 6 ತಿಂಗಳಿಂದ 6 ವರ್ಷದ ಮಕ್ಕಳ ಪೋಷಣೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಕನಿಷ್ಠ 6 ತಿಂಗಳ ಅವಧಿಯ ವಿಷಯವನ್ನು ಅಥವಾ ತರಬೇತಿ ಪಡೆದಿರಬೇಕು. ಆಸಕ್ತರು ಮಾರ್ಚ್ 30ರೊಳಗಾಗಿ ಅರ್ಜಿಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಿರವಾರದಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಿರವಾರ ಇವರನ್ನು ಕಚೇರಿ ವೇಳೆಯಲ್ಲಿ ಭೇಟಿ ನೀಡಬಹುದಾಗಿದೆ ಅಥವಾ ಮೊಬೈಲ್ ಸಂಖ್ಯೆ: 7619281523ಗೆ ಸಂಪರ್ಕ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಇಂದು ಬೆಂಗಳೂರಿನಲ್ಲಿ ಮಾದಿಗರ ಬೃಹತ್ ಪ್ರತಿಭಟನಾ ರ್ಯಾಲಿ: ಉಮೇಶ ಹುನಕುಂಟಿ

ಧೈರ್ಯದ ದಾರಿ



**ಲಿಂಗಸುಗೂರು :** ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಗೆ ತರಬೇಕು ಹಾಗೂ ಅದರ ಅನ್ವಯ ಖಾಲಿ ಇರುವ 56,432 ಸರ್ಕಾರಿ ಹುದ್ದೆಗಳನ್ನು ತಕ್ಷಣವೇ ನೇಮಕಾತಿ ಮಾಡಿಕೊಳ್ಳಬೇಕು ಎಂದು ಮಾರ್ಚ್ ಇಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನಾ ರ್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ಸಮಾಜ ಮುಖಂಡ ಉಮೇಶ ಹುನಕುಂಟಿ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಅನೇಕ ವರ್ಷಗಳಿಂದ ಮಾದಿಗ ಸಮುದಾಯವು ಒಳ ಮೀಸಲಾತಿ ಹಕ್ಕಿಗಾಗಿ ಹೋರಾಟ ನಡೆಸುತ್ತಿದ್ದು, ಈಗಾಗಲೇ ಈ ಸಂಬಂಧ ಹಲವು ಬಾರಿ ರಾಜ್ಯ ಸರ್ಕಾರದ ಗಮನಕ್ಕೆ ತರಲಾಗಿದೆಯಾದರೂ, ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆಕ್ಷೇಪಿಸಿದರು. ಸರ್ಕಾರವು ತಕ್ಷಣವೇ ಒಳ ಮೀಸಲಾತಿ ಜಾರಿಗೊಳಿಸಿ, ಅದರ ಅನ್ವಯ ಖಾಲಿ ಇರುವ 56,432 ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಅವರು ಆಗ್ರಹಿಸಿದರು.

ರಾಜ್ಯದ ವಿವಿಧ ಇಲಾಖೆಗಳಲ್ಲಿಯೂ ದೀರ್ಘಕಾಲದಿಂದ ಸಾವಿರಾರು ಹುದ್ದೆಗಳು ಖಾಲಿ ಉಳಿದಿವೆ. ಇವುಗಳನ್ನು ಒಳ ಮೀಸಲಾತಿ ನಿಯಮದ ಪ್ರಕಾರ ಭರ್ತಿ ಮಾಡಿದರೆ, ಹಿಂದುಳಿದ ಸಮುದಾಯಗಳಿಗೆ ಉದ್ಯೋಗಾವಕಾಶ ದೊರೆಯುವ ಜೊತೆಗೆ ಸಾಮಾಜಿಕ ನ್ಯಾಯ ಸಾಧನೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಮಾದಿಗ ಸಮುದಾಯವು ಹಲವು ದಶಕಗಳಿಂದ ಸಮಾನ ಹಕ್ಕುಗಳಿಗಾಗಿ ಹೋರಾಟ ನಡೆಸುತ್ತಿದ್ದು, ಒಳ ಮೀಸಲಾತಿ ಜಾರಿಗೆ ತರಬೇಕೆಂಬ ಬೇಡಿಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಜನರು ಬೆಂಗಳೂರಿಗೆ ಆಗಮಿಸಿ ಪ್ರತಿಭಟನಾ ರ್ಯಾಲಿಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಉಮೇಶ ಹುನಕುಂಟಿ ತಿಳಿಸಿದರು.

ಈ ರ್ಯಾಲಿಯಲ್ಲಿ ಸಮುದಾಯದ ಮುಖಂಡರು, ಸಂಘಟನೆಗಳ ಪ್ರತಿನಿಧಿಗಳು, ಯುವಕರು ಹಾಗೂ ಮಹಿಳೆಯರು ಸೇರಿದಂತೆ ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ. ರಾಜ್ಯ ಸರ್ಕಾರವು ಈ ಪ್ರತಿಭಟನೆಯನ್ನು ಗಂಭೀರವಾಗಿ ಪರಿಗಣಿಸಿ, ಒಳ ಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಇಂದು ನಡೆಯುವ ಈ ಬೃಹತ್ ಪ್ರತಿಭಟನೆ ರಾಜ್ಯ ಸರ್ಕಾರದ ಗಮನ ಸೆಳೆಯುವ ಪ್ರಮುಖ ಹೋರಾಟವಾಗಲಿದೆ. ಒಳ ಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಸ್ಪಷ್ಟವಾದ ನಿರ್ಧಾರ ಪ್ರಕಟಿಸಬೇಕು ಎಂಬುದು ಸಮಿತಿಯ ಮುಖ್ಯ ಬೇಡಿಕೆಯಾಗಿದೆ. ಪ್ರತಿಭಟನೆಯಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಮಾದಿಗ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಉಮೇಶ ಹುನಕುಂಟಿ ಮನವಿ ಮಾಡಿದ್ದಾರೆ.

## ಆಟೋದಲ್ಲಿ ಹೋಗುತ್ತಿದ್ದ ಮಹಿಳೆಯ 6.73 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

**ಕಲಬುರಗಿ,ಮಾ.11–**ಬೈಕ್ ಮೇಲೆ ಬಂದ 20–25 ವರ್ಷ ವಯಸ್ಸಿನ ಮೂವರು ಅಪರಿಚಿತ ವ್ಯಕ್ತಿಗಳು ಆಟೋದಲ್ಲಿ ಹೋಗುತ್ತಿದ್ದ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್ ಕಿತ್ತುಕೊಂಡು ಹೋಗಿರುವ ಘಟನೆ ನಗರದಲ್ಲಿ ನಡೆದಿದೆ.
ವಾಡಿ ಪಟ್ಟಣದ ವೈಟ್ ಹೌಸ್ ಬಿರ್ಲಾ ಏರಿಯಾ ನಿವಾಸಿ ಸೈಯ್ಯದಾ ಸಾಜೀರಾ ಮತೀನ್ ಎಂಬುವವರ 6.73 ಲಕ್ಷ ರೂ.ಮೌಲ್ಯದ ಚಿನ್ನಾಭರಣ, 20 ಸಾವಿರ ರೂ.ಮೌಲ್ಯದ ಮೊಬೈಲ್ ಮತ್ತು 17 ಸಾವಿರ ರೂ.ನಗದು ಹಣವಿದ್ದ ವ್ಯಾನಿಟಿ ಬ್ಯಾಗ್‌ನ್ನು ಕಸಿದುಕೊಂಡು ಹೋಗಲಾಗಿದ್ದು, ಅವರು ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಸೈಯ್ಯದಾ ಸಾಜೀದಾ ಮತೀನ್ ಅವರು ಕಲಬುರಗಿಯ ಜಮ್ ಜಮ್ ಕಾಲೋನಿಯಲ್ಲಿರುವ ಸಂಬಂಧಿಕರ ಮನೆಯಲ್ಲಿ ಆಯೋಜಿಸಿದ್ದ ರೋಜಾ ರಕ್ಕಾಮಿ ಕಾರ್ಯಕ್ರಮಕ್ಕೆಂದು ವಾಡಿಯಿಂದ ರೈಲ್ವೆ ಮುಖಾಂತರ ಪತಿ ಮತ್ತು ಮಗನೊಂದಿಗೆ ಆಗಮಿಸಿ ಕಾರ್ಯಕ್ರಮ ಮುಗಿಸಿಕೊಂಡು ಮರಳಿ ವಾಡಿಗೆ ಹೋಗಲೆಂದು ರೈಲ್ವೆ ಸ್ಟೇಷನ್‌ಗೆ ಹೋಗುವ ಆಟೋ ಹತ್ತಿದ್ದಾರೆ. ಆಟೋ ಖರ್ಗೆ ಸರ್ಕಲ್ ಹತ್ತಿರ ಹೋದಾಗ ಇಬ್ಬರು ಅಪರಿಚಿತರು ಇದೇ ಆಟೋ ಹತ್ತಿದ್ದು, ಆಟೋ ಮುಂದೆ ಹೋಗುತ್ತಿದ್ದಂತೆಯೇ ಬೈಕ್ ಮೇಲೆ ಬಂದ 20–25 ವರ್ಷ ವಯಸ್ಸಿನ ಮೂವರು ಅಪರಿಚಿತರು ಇವರ ವ್ಯಾನಿಟಿ ಬ್ಯಾಗ್ ಕಿತ್ತುಕೊಂಡು ಪರಾರಿಯಾಗಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಸರ್ವಜ್ಞ ಪದವಿ ಪೂರ್ವ ಕಾಲೇಜಿನಲ್ಲಿ ಪ್ರತಿಭಾ ಪುರಸ್ಕಾರ ಸಮಾರಂಭ




**ಕಲಬುರಗಿ,ಮಾ.11:** ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ ಪ್ರತಿಷ್ಠಾನ, ಸರ್ವಜ್ಞ ಮತ್ತು ಜಸ್ಟೀಸ್ ಶಿವರಾಜ ಪಾಟೀಲ ಪದವಿ ಪೂರ್ವ ಕಾಲೇಜು ಕಲಬುರ್ಗಿ ಹಾಗೂ ರಾಯಚೂರು ಸಂಯುಕ್ತ ಆಶ್ರಯದಲ್ಲಿ ಪ್ರತಿಭಾ ಪುರಸ್ಕಾರ ಸಮಾರಂಭ ಕಾರ್ಯಕ್ರಮದಲ್ಲಿ ನ್ಯಾಯಮೂರ್ತಿ ನಾಡೋಜ ಡಾ. ಶಿವರಾಜ ವಿ. ಪಾಟೀಲ ಅವರು ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಪ್ರತಿಭಾ ಪುರಸ್ಕಾರ ನೀಡಿ ಮಾತನಾಡುತ್ತಾ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದರಿಂದ ಅವರು ಉತ್ತಮ ಸಾಧನೆ ಮಾಡಿ ದೇಶದಲ್ಲಿ ಪ್ರಜ್ಞಾವಂತ ನಾಗರಿಕರಾಗಿ ಬೆಳೆಯುತ್ತಾರೆ. ಬಡವರಿಗೆ ಕಷ್ಟದಲ್ಲಿದ್ದವರಿಗೆ ಸಹಾಯ ಮಾಡುವಾಗ, ದಾನ ಮಾಡುವಾಗ, ದಾಸೋಹ ಮಾಡುವಾಗ ಕೊಡುವ ಕೈ ಮುಂದಾಗಬೇಕು, ತಲೆಬಾಗಬೇಕು. ಭಗವಂತ ಕೊಡುವ ಸಾಮಥ್ರ್ಯ ಕೊಟ್ಟಿದ್ದಾನೆ ಎಂಬ ವಿನಯ ಭಾವನೆ ಇರಬೇಕು ಎಂದರು.
ಮುಂದುವರೆದು ಮಾತನಾಡುತ್ತ, ವಿದ್ಯಾರ್ಥಿಗಳು ತಮ್ಮ ಸಾಮಥ್ರ್ಯದ ಮಟ್ಟಕ್ಕೆ ಗುರಿ ಇಟ್ಟುಕೊಳ್ಳಲಾರದೆ ಉನ್ನತ ಗುರಿ ಮಟ್ಟಕ್ಕೆ ಸಾಮಥ್ರ್ಯ ಬೆಳೆಸಿಕೊಳ್ಳಬೇಕು. ತಮ್ಮ ಮುಂದಿನ ಕೆಲಸ ಏನು? ಇನ್ನು ಹೆಚ್ಚಿಗೆ ಏನನ್ನು ಮಾಡಬಹುದು? ಇನ್ನು ಏನಾದರೂ ಸಾಧನೆ ಮಾಡಬಹುದಾ? ಎಂದು ಚಿಂತಿಸಿ ಆ ನಿಟ್ಟಿನಲ್ಲಿ ಕಾರ್ಯ ಪ್ರವೃತರಾಗಬೇಕು. ಭಾರತದ ನಾಗರಿಕರಾಗಿ ಮೂಲಭೂತ ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸಬೇಕು. ಸದೃಢ. ಸಮೃದ್ಧ. ನೆಮ್ಮದಿಯ ಭಾರತ ಕಟ್ಟುವಲ್ಲಿ ಶ್ರಮಿಸಬೇಕು ಎಂದರು. ಅದಕ್ಕಾಗಿ ಮಾನವೀಯ ದೃಷ್ಟಿಯಿಂದ ದೇಶಕ್ಕಾಗಿ, ಸಮಾಜಕ್ಕಾಗಿ ನಾನೇನು ಮಾಡಬಹುದು ಎಂದು ದಿನದ ಒಂದು ಕ್ಷಣವಾದರೂ ಯೋಚಿಸಿ ಕೈಲಾದಷ್ಟು ಸಮಾಜಸೇವೆ ಮಾಡಬೇಕು. ಸಕಾರಾತ್ಮಕವಾಗಿ ಯೋಚಿಸಬೇಕು. ಹೃದಯ ಸದ್ಗುಣಗಳ ಆಧಾರವಾಗಿರಬೇಕು, ಆಗ ಇಲ್ಲಿಯೇ ಸ್ವರ್ಗ ಕಾಣಬಹುದು. ನಾನು ಭಾರತೀಯನೆಂಬ ಹೆಮ್ಮೆಯಿಂದ ಇರಬೇಕು. ನಾನು ಕನ್ನಡಿಗನೆಂಬ ಅಭಿಮಾನದಿಂದಿರಬೇಕು. ನಾನು ವಿಶ್ವಮಾನವನೆಂಬ ಪ್ರೀತಿ ಹೊಂದಿರಬೇಕು. ಉತ್ತಮ ಸತ್ಪ್ರಜೆಯಾಗಿ ಬಾಳಬೇಕೆಂದು ಪ್ರೋತ್ಸಾಹ ನೀಡಿದರು.
ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ನ್ಯಾಯಮೂರ್ತಿ ಟಿ. ಎನ್. ಇನವಳ್ಳಿ ಅವರು ಮಾತನಾಡುತ್ತಾ ಸೌಜನ್ಯ, ಸೌಮ್ಯತೆ, ವಿನಮ್ರತೆ ಇದ್ದರೆ ಯಾವ ಮಟ್ಟಕ್ಕೆ ಏರಬಹುದು ಎಂಬುದಕ್ಕೆ ಜಸ್ಟಿಸ್ ಡಾ. ಶಿವರಾಜ ಪಾಟೀಲ ಅವರೇ ನಮಗೆಲ್ಲ ಮಾದರಿಯಾಗಿದ್ದಾರೆ. ಅವರು ಈ ನಾಡು ಕಂಡ ಸರಳ ಸಜ್ಜನಿಕೆಯ, ಮಾನವೀಯ ಮೌಲ್ಯಗಳ ಸಾಕಾರ ಮೂರ್ತಿ, ನ್ಯಾಯ ಮೂರ್ತಿ. ಡಾ. ಶಿವರಾಜ ವಿ. ಪಾಟೀಜ ಅವರು ಕಾನೂನಿನ ಚೌಕಟ್ಟಿನಲ್ಲಿ ಬಡವರ ನೊಂದವರ ಅಸಹಾಯಕರ ಕಣ್ಣೀರು ಒರೆಸುವ ಶ್ರೇಷ್ಠ ಕೆಲಸ ಮಾಡಿ ನಮಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.
ಕಾರ್ಯಕ್ರಮದ ಅತಿಥಿಗಳಾದ ಡಾ. ಡಿ. ವಿ. ಪರಮಶಿವಮೂರ್ತಿ ಅವರು ಮಾತನಾಡುತ್ತಾ ನ್ಯಾಯಮೂರ್ತಿ ಡಾ. ಶಿವರಾಜ ವಿ. ಪಾಟೀಲ ಅವರ ಮನಸ್ಸಿನ ಮೃದುತ್ವ, ಪ್ರೀತಿ, ಪರಿಶುದ್ಧತೆ, ಪ್ರಾಮಾಣಿಕತೆ, ನಿರ್ಮಲ ಪ್ರೇಮ, ಸಕಾರಾತ್ಮಕ ಯೋಚನೆ, ಸಮಾಜದ ಬಗೆಗಿನ ಕಳಕಳಿ ಇವುಗಳಲ್ಲಿ ಒಂದಂಶವಾದರೂ ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಮನುಷ್ಯ ಜನ್ಮ ಸಾರ್ಥಕವಾಗುತ್ತದೆ. ಅವರು ಈ ಜಗತ್ತಿನ ಪುಣ್ಯ ಪುರುಷರಾಗಿದ್ದಾರೆ. ಯುವಜನಾಂಗಕ್ಕೆ ಮಾದರಿಯಾಗಿದ್ದಾರೆ. ಎಂದು ಹೇಳಿದರು.
ರಂಜಾನ್ ದರ್ಗಾ ಅವರು ಗೌರವ ಅತಿಥಿಗಳಾಗಿದ್ದರು.ಸಾನಿಧ್ಯ ವಹಿಸಿಕೊಂಡಿರುವ ಇಲಕಲ್ ಚಿತ್ತರಗಿ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಪೂಜ್ಯ ಗುರು ಮಹಾಂತ ಸ್ವಾಮಿಗಳು ಕಾರ್ಯಕ್ರಮದ ಸಮ್ಮುಖ ವಹಿಸಿಕೊಂಡಿರುವ ನಾಲವಾರ್ ಕೋರಿ ಸಿದ್ದೇಶ್ವರ ಮಹಾ ಸಂಸ್ಥಾನ ಮಠದ ಪೂಜ್ಯ ಡಾ. ಸಿದ್ದತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು
ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ, ಜೆಇಇ, ನೀಟ್, ಸಿಇಟಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳಿಸಿದ ಬಡಪ್ರತಿಭಾವಂತ ವಿದ್ಯಾರ್ಥಿಗಳಿಗೆ ರೂ. 25,000 ವಿದ್ಯಾರ್ಥಿವೇತನ, ರೂ. 11,000 ಪ್ರೋತ್ಸಾಹಧನ ಹಾಗೂ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.
ಕಾರ್ಯಕ್ರಮದಲ್ಲಿ ಕೆ. ಎಲ್. ರಾಜಶೇಖರ, ಎನ್. ಶರಣಪ್ಪ, ಗೀತಾ ಚನ್ನಾರಡ್ಡಿ , ಅಭಿಷೇಕ್ ಚನ್ನಾರಡ್ಡಿ ಪಾಟೀಲ, ಡಾ. ರಾಕೇಶ್ ಚನ್ನಾರಡ್ಡಿ ಪಾಟೀಲ್, ಪ್ರಾಚಾರ್ಯ ಪ್ರಶಾಂತ್ ಕುಲಕರ್ಣಿ, ವಿನುತಾ ಆರ್.ಬಿ., ಕರುಣೇಶ್ ಹಿರೇಮಠ, ಗುರುರಾಜ ಕುಲಕರ್ಣಿ, ಜಿಲ್ಲಾ ನ್ಯಾಯಾಧೀಶರು, ವಕೀಲರು, ಸಾಹಿತಿಗಳು, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ತ್ರಿವೇಣಿ ಭಾವಿ ವಂದಿಸಿದರು. ಡಾ. ವಿದ್ಯಾವತಿ ಪಾಟೀಲ್ ನಿರೂಪಿಸಿದರು.

# ಔಷಧ ನಿಯಮಗಳ ತಿದ್ದುಪಡಿ ಮುಂದಾದ ಕೇಂದ್ರ ಸರ್ಕಾರ

**ನವದೆಹಲಿ, ಮಾ. 11–** ರಕ್ತ ಉತ್ಪನ್ನಗಳನ್ನು ಅಂತರರಾಷ್ಟ್ರಿಯವಾಗಿ ಅಂಗೀಕರಿಸಲ್ಪಟ್ಟ ಔಷಧೀಯ ಮಾನದಂಡಗಳೊಂದಿಗೆ ಪರೀಕ್ಷಿಸಲು ನಿಯಂತ್ರಕ ಅವಶ್ಯಕತೆಗಳನ್ನು ಹೊಂದಿಸಲು ಮತ್ತು ಜಾಗತಿಕ ಅತ್ಯುತ್ತಮ ಅಭ್ಯಾಸಗಳ ಅಡಿಯಲ್ಲಿ ಖಾತರಿಪಡಿಸದ ಪರೀಕ್ಷಾ ಅವಶ್ಯಕತೆಗಳನ್ನು ತೆಗೆದುಹಾಕಲು ಕೇಂದ್ರ ಆರೋಗ್ಯ ಸಚಿವಾಲಯವು 1945 ರ ಔಷಧ ನಿಯಮಗಳನ್ನು ತಿದ್ದುಪಡಿ ಮಾಡಲು ಪ್ರಸ್ತಾಪಿಸಿದೆ.

ಇದು ಕರಡು ಗೆಜೆಟ್ ಅಧಿಸೂಚನೆಯನ್ನು ಹೊರಡಿಸಿದ್ದು, ಔಷಧ ನಿಯಮಗಳು 1945 ರ ಪ್ಯಾರಾಗ್ರಾಫ್ ಜಿ (ರಕ್ತ ಉತ್ಪನ್ನಗಳ ಪರೀಕ್ಷೆ), ಭಾಗ ಸಿ, ವೇಳಾಪಟ್ಟಿ ಎಫ್ ಅನ್ನು ತಿದ್ದುಪಡಿ ಮಾಡುವ ಪ್ರಸ್ತಾಪದ ಕುರಿತು ಸಾರ್ವಜನಿಕ ಅಭಿಪ್ರಾಯಗಳನ್ನು ಆಹ್ವಾನಿಸಿದೆ.ಪ್ರಸ್ತಾವಿತ ತಿದ್ದುಪಡಿಯು ಅಂತರರಾಷ್ಟ್ರಿಯವಾಗಿ ಅಂಗೀಕರಿಸಲ್ಪಟ್ಟ ಔಷಧೀಯ ಮಾನದಂಡಗಳೊಂದಿಗೆ ರಕ್ತ ಉತ್ಪನ್ನಗಳನ್ನು ಪರೀಕ್ಷಿಸಲು ನಿಯಂತ್ರಕ ಅವಶ್ಯಕತೆಗಳನ್ನು ಜೋಡಿಸಲು ಮತ್ತು ಜಾಗತಿಕ ಅತ್ಯುತ್ತಮ ಅಭ್ಯಾಸಗಳ ಅಡಿಯಲ್ಲಿ ಖಾತರಿಪಡಿಸದ ಉತ್ಪನ್ನಗಳ ಮೇಲಿನ ಹೆಚ್ಚುವರಿ ಪರೀಕ್ಷಾ ಅವಶ್ಯಕತೆಗಳನ್ನು ತೆಗೆದುಹಾಕಲು ಪ್ರಯತ್ನಿಸುತ್ತದೆ ಎಂದು ಸಚಿವಾಲಯ ಹೇಳಿದೆ.

ಭಾರತೀಯ ಫಾರ್ಮಾಕೋಪಿಯಾ (ಐಪಿ), ಬ್ರಿಟಿಷ್ ಫಾರ್ಮಾಕೋಪಿಯಾ (ಬಿಪಿ), ಯುನೈಟೆಡ್ ಸ್ಟೇಟ್ ಫಾರ್ಮಾಕೋಪಿಯಾ (ಯುಎಸ್‌ಪಿ) ಮತ್ತು ಯುರೋಪಿಯನ್ ಫಾರ್ಮಾಕೋಪಿಯಾ (ಇಪಿ) ನಲ್ಲಿನ ಭಿನ್ನರಾಶಿಗಾಗಿ ಮಾನವ ಪ್ಲಾಸ್ಮಾದ ಅಧಿಕೃತ ಮಾನೋಗ್ರಾಫ್‌ಗಳ ಪ್ರಕಾರ, ಪೂಲ್ ಮಾಡಿದ ಮಾನವ ಪ್ಲಾಸ್ಮಾಕ್ಕೆ ಕಠಿಣ ಪರೀಕ್ಷಾ ಪ್ರೊಟೋಕಾಲ್‌ಗಳನ್ನು ಸೂಚಿಸಲಾಗುತ್ತದೆ.ಈ ಸಾಮರಸ್ಯದ ಮಾನದಂಡಗಳ ಅಡಿಯಲ್ಲಿ, ಪ್ಲಾಸ್ಮಾದ ಮೊದಲ ಏಕರೂಪದ ಪೂಲ್ ಅನ್ನು ಹೆಪಟೈಟಿಸ್ ಬಿ ಮೇಲ್ಮೈ ಪ್ರತಿಜನಕ , ಹೆಪಟೈಟಿಸ್ ಸಿ ವೈರಸ್ ಆರ್‌ಎನ್‌ಎ ಮತ್ತು ಹೆಚ್‌ಐವಿಗೆ ಪ್ರತಿಕಾಯಗಳಿಗಾಗಿ ಕಡ್ಡಾಯವಾಗಿ ಪರೀಕ್ಷಿಸಲಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ.ಪೂಲ್ ಮಾಡಿದ ಪ್ಲಾಸ್ಮಾವನ್ನು ವಿಭಜನೆಗೆ ಅನುಮತಿಸುವ ಮೊದಲು ಈ ವೈರಲ್ ಮಾರ್ಕರ್‌ಗಳಿಗೆ ನಕಾರಾತ್ಮಕತೆಯನ್ನು



ಪರೀಕ್ಷಿಸಬೇಕು ಎಂದು ಅದು ಹೇಳಿದೆ. ಇದಲ್ಲದೆ, ಈ ಸುರಕ್ಷತಾ ಅವಶ್ಯಕತೆಗಳನ್ನು ಪೂರೈಸುವ ಪ್ಲಾಸ್ಮಾ ಪೂಲ್‌ಗಳನ್ನು ಮಾತ್ರ ಪ್ಲಾಸ್ಮಾ–ಪಡೆದ ಔಷಧೀಯ ಉತ್ಪನ್ನಗಳನ್ನು ತಯಾರಿಸಲು ಬಳಸಲಾಗುತ್ತದೆ.ಇದರ ಹೊರತಾಗಿಯೂ, ಪ್ರಸ್ತುತ ನಿಯಂತ್ರಕ ಚೌಕಟ್ಟಿನ ಅಡಿಯಲ್ಲಿ, ಈಗಾಗಲೇ ಪರೀಕ್ಷಿಸಲ್ಪಟ್ಟ ಮತ್ತು ಅರ್ಹವಾದ ಪ್ಲಾಸ್ಮಾ ಪೂಲ್‌ಗಳಿಂದ ತಯಾರಿಸಿದ ಅಂತಿಮ ಉತ್ಪನ್ನಗಳನ್ನು ಮತ್ತೆ ಪರೀಕ್ಷಿಸಲಾಗುತ್ತದೆ ಎಂದು ಸಚಿವಾಲಯ ಹೇಳಿದೆ.

ಇದು ಪೂಲ್ ಮಾಡಿದ ಪ್ಲಾಸ್ಮಾ ಹಂತ ಮತ್ತು ಸಿದ್ಧಪಡಿಸಿದ ಉತ್ಪನ್ನ ಹಂತ ಎರಡರಲ್ಲೂ ಒಂದೇ ವೈರಲ್ ಮಾರ್ಕರ್‌ಗಳಿಗೆ ಪರೀಕ್ಷೆಯ ನಕಲುಗೆ ಕಾರಣವಾಗುತ್ತದೆ. ಅಂತಹ ಡಬಲ್ ಪರೀಕ್ಷೆಯು ಅಂತರರಾಷ್ಟ್ರಿಯ ನಿಯಂತ್ರಕ ಅಭ್ಯಾಸಗಳೊಂದಿಗೆ ಹೊಂದಿಕೆಯಾಗುವುದಿಲ್ಲ.ಪ್ರಸ್ತಾವಿತ ತಿದ್ದುಪಡಿಯು ನಿಯಂತ್ರಕ ಸಾಮರಸ್ಯ, ಪರೀಕ್ಷಾ ಅವಶ್ಯಕತೆಗಳ ವೈಜ್ಞಾನಿಕ ತರ್ಕಬದ್ಧಗೊಳಿಸುವಿಕೆ ಮತ್ತು ರೋಗಿಯ ಸುರಕ್ಷತೆಯ ಅತ್ಯುನ್ನತ ಮಾನದಂಡಗಳನ್ನು ಎತ್ತಿಹಿಡಿಯುವುದನ್ನು ಮುಂದುವರಿಸುವಾಗ ತಪ್ಪಿಸಬಹುದಾದ ಅನುಸರಣೆ ಹೊರೆಯನ್ನು ಕಡಿಮೆ ಮಾಡುವತ್ತ ಪ್ರಗತಿಪರ ಹೆಜ್ಜೆಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಕರಡು ಅಧಿಸೂಚನೆಯನ್ನು ಪರಿಶೀಲಿಸಲು ಮತ್ತು ನಿಗದಿತ ಸಮಯದೊಳಗೆ ತಮ್ಮ ಕಾಮೆಂಟ್‌ಗಳು ಮತ್ತು ಸಲಹೆಗಳನ್ನು ಸಲ್ಲಿಸಲು ಪಾಲುದಾರರನ್ನು ಪ್ರೋತ್ಸಾಹಿಸಲಾಗುತ್ತದೆ ಎಂದು ಅದು ಹೇಳಿದೆ.

# ಸಿರುಗುಪ್ಪ ಸಿಂಧನೂರು ರೈಲ್ವೇ ಮಾರ್ಗ ನಿರ್ಮಾಣಕ್ಕೆ ಸಚಿವ ಸೋಮಣ್ಣಗೆ ರೈಲ್ವೆ ಕ್ರಿಯಾ ಸಮಿತಿ ಮನವಿ



**ಸಿರುಗುಪ್ಪ :ಮಾ,11–** ರಾಜ್ಯದ ರೈಲ್ವೇ ಕ್ರಿಯಾ ಸಮಿತಿಯ ನಿಯೋಗವು ದೆಹಲಿಗೆ ತೆರಳಿ ಬಳ್ಳಾರಿ, ಸಿರುಗುಪ್ಪ, ಸಿಂಧನೂರು, ಲಿಂಗಸುಗೂರು ನೂತನ ರೈಲ್ವೆ ಮಾರ್ಗ ದ ಆರಂಭಕ್ಕೆ ಆಗ್ರಹಿಸಿ ಕೇಂದ್ರದ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮೊದಲಾದವರಿಗೆ ಇಂದು ಮನವಿ ಸಲ್ಲಿಸಿದೆ.

ಹಿಂದಿನ ಯುಪಿಎ ಸರ್ಕಾರದ ರೈಲ್ವೆ ಸಚಿವ ಮಲ್ಲಿಕಾರ್ಜುನ ಖರ್ಗೆ ಹಾಗೂ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ರೈಲ್ವೆ ಮಂತ್ರಿ ಸದಾನಂದಗೌಡರು ತಮ್ಮ ರೈಲ್ವೆ ಬಜೆಟ್ಟಿನಲ್ಲಿ ಈ ಮಾರ್ಗಕ್ಕೆ ಸರ್ವೆ ಆದೇಶ ಮಾಡಿದ್ದರು. ಸರ್ವೆ ಮುಗಿಸಿ13 ವರ್ಷ ಗಳಾಗಿವೆ. ಆದರೆ ಇಂದಿಗೂ ಈ ಮಾರ್ಗದ ಕೆಲಸ ಆರಂಭವಾಗಿಲ್ಲ. ಕೂಡಲೇ ಬಳ್ಳಾರಿ ಸಿರುಗುಪ್ಪ ಸಿಂಧನೂರು ನೂತನ ರೈಲು ಮಾರ್ಗದ ನಿರ್ಮಾಣದ ಕೆಲಸ ಆರಂಭಿಸಬೇಕು.

ಬಳ್ಳಾರಿ ಇಂದ ಬೆಂಗಳೂರಿಗೆ ಸೂಪರ್ ಫಾಸ್ಟ್ ರೈಲು ಇಲ್ಲವೇ ಒಂದೇ ಭಾರತ ರೈಲಿನ ಸೌಲಭ್ಯ ಒದಗಿಸಬೇಕು.
ಬಳ್ಳಾರಿ ಮಾರ್ಗದಲ್ಲಿ ಸಂಚರಿಸುತ್ತಿದ್ದ ಕೊಲ್ಲಾಪುರ ಮುನಗೂರು ಎಕ್ಸ್ಪ್ರೆಸ್ ರೈಲು ರೈಲ್ವೆ ಬಜೆಟಿನಲ್ಲಿ ಘೋಷಣೆಯಾಗಿ ಲೋಕಸಭೆಯಿಂದ ಅನುಮೋದನೆ ಪಡೆದ ರೈಲಾಗಿತ್ತು ಕಳೆದ ಒಂದು ವರ್ಷದಿಂದ ಈ ರೈಲು ಓಡುತ್ತಿಲ್ಲ. ಅದೇ ರೀತಿ ಶಿವಮೊಗ್ಗ ಚೆನ್ನೈ ಬೈ ವೀಕ್ಲಿ ರೈಲುಗಳು ನಿಲುಗಡೆ ಯಾಗಿದ್ದು ಈ ರೈಲುಗಳನ್ನು ಪುನಾರಾರಂಭಿಸಬೇಕು ಬಳ್ಳಾರಿ ರೈಲ್ವೆ ನಿಲ್ದಾಣದ ಆಧುನಿಕರಣ ಬೇಗನೆ ಪೂರ್ಣಗೊಳ್ಳಬೇಕು ಜೊತೆಗೆ ರಸಗೊಬ್ಬರಗಳ ಡೌನ್ಲೋಡಿಂಗ್ ಗೆ ಹೆಚ್ಚಿನ ಅನುಕೂಲ ಮಾಡಿಕೊಡಬೇಕು ಸೇರಿದಂತೆ ಹಲವು ಬೇಡಿಕೆಗಳಮನವಿ ಪತ್ರವನ್ನು ಕೇಂದ್ರ ಪ್ರಹ್ಲಾದ ಜೋಶಿ, ಬೆಳಗಾವಿ ಲೋಕಸಭಾ ಸದಸ್ಯ ಜಗದೀಶ್ ಶೆಟ್ಟರ್ ಇವರಿಗೆ ನಿಯೋಗ ನೀಡಿದೆ.

ನಿಯೋಗದಲ್ಲಿ ರೈಲ್ವೆ ಕ್ರಿಯಾ ಸಮಿತಿ ಅಧ್ಯಕ್ಷ ಕೆ.ಎಂ. ಮಹೇಶ್ವರ ಸ್ವಾಮಿ, ಸಿರುಗುಪ್ಪದ ಮಾಜಿ ಶಾಸಕ ಎಂ ಎಸ್ ಸೋಮಲಿಂಗಪ್ಪ. ಯೋಗಿರಾಜ್, ಗೋನಾಳ್ ರಾಜಶೇಖರಗೌಡ, ದಮ್ಮೂರು ಶೇಖರ್, ಪಲ್ಲೇದ ದೊಡ್ಡಪ್ಪ, ಗಣಪಾಲ್ ಐನಾಥ ರೆಡ್ಡಿ, ತೆಕ್ಕಲಕೋಟೆಯ ವೀರೇಶ್, ಬಂಡೆಗೌಡ ಮೊದಲಾದವರು ಇದ್ದರು.

# ಸಂಜಯಗಾಂಧಿ ಪಾಲಿಟೆಕ್ನಿಕ್ ಕಾಲೇಜು ವಿದ್ಯಾರ್ಥಿ ಅರವಿಂದ ಆತ್ಮಹತ್ಯೆ

**ಬಳ್ಳಾರಿ, ಮಾ.11:** ನಗರದ ಸಂಜಯ ಗಾಂಧಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವ್ಯಾಸಂಗ ಮಾಡ್ತಿದ್ದ ವಿದ್ಯಾರ್ಥಿ ಯೋರ್ವ ನೇಣು ಬಿಗಿದುಕೊಂಡು ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ನಿನ್ನೆ ಕಾಲೇಜಿನಲ್ಲಿ ಉಪನ್ಯಾಸಕರು ಬೈದಿರೋದು ಅತ್ಯಹತ್ಯೆಗೆ ಕಾರಣ ಎಂದು ಅರೋಪ ಕೇಳಿಬಂದಿದೆ



ನಗರದ ಗುಗ್ಗರಹಟ್ಟಿ ಪ್ರದೇಶದ ಅರವಿಂದ ಆತ್ಮಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿಯಾಗಿದ್ದಾನೆ.
ನಿನ್ನೆ ದಿನ ಕಾಲೇಜಿನ ವಿದ್ಯಾರ್ಥಿಗಳ ಮಧ್ಯೆ ಒಂದಷ್ಟು ಜಗಳವಾಗಿತ್ತು. ಆಗ ಆರವಿಂದ ಪೋಷಕರನ್ನು ಕಾಲೇಜಿನ ಉಪನ್ಯಾಸಕರು ಕರೆದು. ಹೀಗೆ ಗಲಾಟೆ ಮಾಡೋ ಹುಡುಗರನ್ನು ನಾವು ಕಾಲೇಜಿನಲ್ಲಿ ಇರಿಸಿಕೊಳ್ಳಲು ಸಾಧ್ಯವಿಲ್ಲ. ಇದು ಲಾಸ್ಟ್ ವಾರ್ನಿಂಗ್ ಎಂದು ಹೇಳಿ ಕಳುಹಿಸಿದ್ದರು. ಇದರಿಂದ ಮನನೊಂದ ಅರವಿಂದ ನಿನ್ನೆ ಮನೆಯಲ್ಲಿ ನೇಣಿಗೆ ಶರಣಾಗಿದ್ದಾನೆ ಎಂಬ ಆರೋಪವಾಗಿದೆ.

ಇಂದು ಬೆಳಿಗ್ಗೆ ಅರವಿಂದ ಸಾವಿನ ಹಿನ್ನಲೆಯಲ್ಲಿ ಕಾಲೇಜಿನಲ್ಲಿ ಶ್ರದ್ಧಾಂಜಲಿ ಸಭೆ ನಡೆಸಲಾಯ್ತು. ನಂತರ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಅರವಿಂದ ಗೆ ಕಾಲೇಕಿನ ಹೆಡಿ ಮತ್ತು ಉಪನ್ಯಾಸಕರು ಬೈದಿರೋದೇ ಕಾರಣ ಎಂದು ಆರೋಪಿಸಿ ಹೈಡ್ರಾಮ ನಡೆದು ಅರವಿಂದ ಸಾವಿನ ವಿಷಯದಲ್ಲಿ ರೊಚ್ಚಿಗೆದ್ದ ವಿದ್ಯಾರ್ಥಿಗಳು. ಕಾಲೇಜಿನ ಟೇಬಲ್, ಗ್ಲಾಸ್ ಒಡೆದು ಹಾಕಿ ಆಡಳಿತ ಮಂಡಳಿ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಆಡಳಿತ ಮಂಡಳಿ ಬರಬೇಕು ನ್ಯಾಯ ಕೊಡಬೇಕೆಂದು ವಿದ್ಯಾರ್ಥಿಗಳು ಪಟ್ಟು ಹಿಡಿದಿದ್ದರು. ಸ್ಥಳಕ್ಕೆ ಬ್ರೂಸ್ ಪೇಟ್ ಪೊಲೀಸರು ಅಗಮಿಸಿ ಪರಿಸ್ಥಿತಿ ತಿಳಿಗೊಳಿಸಿದರು.

# ದಾದಿ ಹೃದಯಮೋಹಿನಿ ಅವರ ಪುಣ್ಯಸ್ಮರಣೆ ಅಂಗವಾಗಿ ರಕ್ತದಾನ ಶಿಬಿರ



**ಬೀದರ್:ಮಾ.11:** ಪ್ರಜಾಪಿತಾ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯದ ಜೆಪಿ ನಗರ ಪಾವನಧಾಮ ಕೇಂದ್ರದ ವತಿಯಿಂದ ಸಂಸ್ಥೆಯ ಪೂರ್ವ ಮುಖ್ಯ ಆಡಳಿತಾಧಿಕಾರಿಯಾಗಿದ್ದ ರಾಜಯೋಗಿನಿ ದಾದಿ ಹೃದಯಮೋಹಿನಿ ಅವರ ಐದನೇ ಪುಣ್ಯಸ್ಮರಣೆ ದಿನದ ಅಂಗವಾಗಿ ರಕ್ತದಾನ ಶಿಬಿರವನ್ನು ಆಯೋಜಿಸಲಾಯಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಇಂಡಿಯನ್ ರೆಡ್ ಕ್ರಾಸ್ ಸಂಸ್ಥೆಯ ಬೀದರ ಜಿಲ್ಲಾಧ್ಯಕ್ಷರಾದ ಡಾ. ವಿದ್ಯಾ ಪಾಟೀಲ್ ಅವರು ನೆರವೇರಿಸಿದರು.
ಈ ಸಂದರ್ಭದಲ್ಲಿ ಮಾತನಾಡಿದ ಡಾ. ವಿದ್ಯಾ ಪಾಟೀಲ್ ಅವರು, ರಕ್ತದಾನವು ಮಾನವ ಜೀವ ಉಳಿಸುವ ಅತ್ಯಂತ ಮಹತ್ವದ ಸೇವೆಯಾಗಿದೆ ಎಂದು ಹೇಳಿದರು. ಅಪಘಾತಗಳು, ತುರ್ತು ಶಸ್ತ್ರಚಿಕಿತ್ಸೆಗಳು ಹಾಗೂ ವಿವಿಧ ರೋಗಗಳ ಸಂದರ್ಭದಲ್ಲಿ ರಕ್ತದ ಅಗತ್ಯತೆ ಹೆಚ್ಚಾಗಿ ಎದುರಾಗುತ್ತದೆ. ಇಂತಹ ಸಂದರ್ಭಗಳಲ್ಲಿ ರಕ್ತದಾನ ಮಾಡಿದವರ ಸಹಕಾರ ಅನೇಕ ಜನರ ಜೀವ ಉಳಿಸಲು ಕಾರಣವಾಗುತ್ತದೆ ಎಂದು ತಿಳಿಸಿದರು. ಒಬ್ಬ ವ್ಯಕ್ತಿ ಮಾಡಿದ ರಕ್ತದಾನದಿಂದ ಮೂವರಿಗೆ ಜೀವದ ಆಶಾಕಿರಣ ದೊರೆಯಬಹುದು. ಆರೋಗ್ಯವಂತರು ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಸಮಾಜಕ್ಕೆ ಅಮೂಲ್ಯ ಸೇವೆ ಸಲ್ಲಿಸಬಹುದು. ರಕ್ತದಾನದಿಂದ ಯಾವುದೇ ರೀತಿಯ ದೈಹಿಕ ಹಾನಿ ಆಗುವುದಿಲ್ಲ; ಬದಲಾಗಿ ಇದು ದೇಹದ ಆರೋಗ್ಯಕ್ಕೂ ಸಹಕಾರಿ ಆಗುತ್ತದೆ. ಆದ್ದರಿಂದ ಯುವಕರು ಹಾಗೂ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಶಿಬಿರಗಳಲ್ಲಿ ಭಾಗವಹಿಸಿ ಮಾನವೀಯ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.
ಪಾವನಧಾಮ ರಾಜಯೋಗ ಕೇಂದ್ರದ ಸಂಚಾಲಕಿ ಬಿ.ಕೆ. ಪ್ರತಿಮಾ ಬಹೇನಜಿ ಮಾತನಾಡಿ, ದಾದಿ ಹೃದಯಮೋಹಿನಿ ಅವರು ತಮ್ಮ ಸಂಪೂರ್ಣ ಜೀವನವನ್ನು ಜನಸೇವೆಗೆ ಮುಡುಪಾಗಿಟ್ಟ ಮಹಾನ್ ಆತ್ಮೆಯಾಗಿದ್ದರು ಎಂದು ಹೇಳಿದರು. ಸರಳತೆ, ಪಾವಿತ್ರತೆ ಹಾಗೂ ಸತ್ಯತೆಯ ಆಧಾರದಿಂದ ಪರಮಾತ್ಮನ ಶಕ್ತಿಯನ್ನು ಸ್ವತಃ ಅನುಭವಿಸಿ ಅನೇಕ ಜನರಿಗೆ ಆ ದಿವ್ಯ ಶಕ್ತಿಯ ಅನುಭವವನ್ನು ಮಾಡಿಸಿದ ಮಹಾನ್ ದಿವ್ಯ ಚೇತನರಾಗಿದ್ದರು ಎಂದು ಸ್ಮರಿಸಿದರು.
ಇಂದು ದಾದಿ ಅವರು ದೇಹತಃ ನಮ್ಮೊಂದಿಗಿಲ್ಲದಿದ್ದರೂ ಸಹ, ಅವರ ಆದರ್ಶಗಳು, ಉಪದೇಶಗಳು ಹಾಗೂ ಅವರು ತೋರಿಸಿದ ಮಾರ್ಗವು ನಮ್ಮೆಲ್ಲರಿಗೂ ಸದಾ ಪ್ರೇರಣೆಯಾಗಿವೆ.
ಸಮಾಜಸೇವೆಗೆ ತಮ್ಮ ಜೀವನವನ್ನೇ ಅರ್ಪಿಸಿದ ದಾದಿ ಅವರ ಸ್ಮರಣಾರ್ಥವಾಗಿ ಜೀವದ ಆಧಾರವಾದ ರಕ್ತವನ್ನು ದಾನ ಮಾಡುವ ಮೂಲಕ ಅನೇಕ ಜನರ ಜೀವ ಉಳಿಸಲು ಸಹಕಾರ ನೀಡುವ ಉದ್ದೇಶದಿಂದ ಈ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.
ಬೀದರ ನಗರದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಕ್ತದಾನ ಮಾಡುವ ಮೂಲಕ ಸಮಾಜಸೇವೆಯಲ್ಲಿ ಪಾಲ್ಗೊಂಡು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘಟಕರು ಮನವಿ ಮಾಡಿದರು. ಪ್ರತಿ ವರ್ಷ ಮಾರ್ಚ್ 11ರಂದು ಈ ದಿನವನ್ನು ಬ್ರಹ್ಮಕುಮಾರೀಸ್ ಸಂಸ್ಥೆಯು ವಿಶ್ವದಾದ್ಯಂತ "ದಿವ್ಯತಾ ದಿನ"ವೆಂದು ಆಚರಿಸುತ್ತಿದ್ದು, ಈ ಸಂದರ್ಭದಲ್ಲಿ ದಿವ್ಯ ಚೇತನರಾದ ದಾದಿ ಹೃದಯಮೋಹಿನಿ ಅವರಿಗೆ ಶ್ರದ್ಧಾ ಸುಮನೆಗಳನ್ನು ಅರ್ಪಿಸಲಾಯಿತು.
ಈ ಸಂದರ್ಭದಲ್ಲಿ ಬೀದರ ಪಾವನಧಾಮ ರಾಜಯೋಗ ಕೇಂದ್ರದ ಸಂಚಾಲಕಿ ಬಿ.ಕೆ. ಪ್ರತಿಮಾ ಬಹೇನಜಿ, ಬಿ.ಕೆ. ಗುರುದೇವಿ ಬಹೇನಜಿ, ರೆಡ್ ಕ್ರಾಸ್ ಹಾಗೂ ಬ್ಲಡ್ ಬ್ಯಾಂಕ್ ಅಧಿಕಾರಿ ಡಾ ಖಿರತ್ ಉಲ್ ಐನ್ ಉಪಸ್ಥಿತರಿದ್ದರು. ರಕ್ತದಾನ ಮಾಡಿದವರಿಗೆ ಪ್ರಮಾಣಪತ್ರ ಹಾಗೂ ಹಣ್ಣುಗಳನ್ನು ನೀಡಿ ಗೌರವಿಸಲಾಯಿತು.

# ವಿದ್ಯೆಗೆ ಜಾತಿಯಿಲ್ಲ; ಮನುಷ್ಯನಿಗೇಕೆ ಜಾತಿ : ಆಲೂರು ಶ್ರೀ



**ಜೇವರಗಿ,ಮಾ.11:** ತಾಲೂಕಿನ ದತ್ತನಗರದಲ್ಲಿರುವ ಜ್ಞಾನಜ್ಯೋತಿ ಹಿರಿಯ ಪ್ರಾಥಮಿಕ ಹಾಗೂ ಅರುಣೋದಯ ಆಂಗ್ಲ ಮಾಧ್ಯಮ ಶಾಲೆಯು ವತಿಯಿಂದ ಶಾಲಾ ಆವರಣದಲ್ಲಿ 19ನೇ ವಾರ್ಷಿಕೋತ್ಸವ ಹಾಗೂ 8ನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು.
ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಆಲೂರು ಕೆಂಚವೃಷಬೇಂದ್ರ ಶಿವಾಚಾರ್ಯರು, ವಿದ್ಯೆ ಇರುವವನ ಹತ್ತಿರ ದೇವರು ಇರುತ್ತಾನೆ; ವಿದ್ಯೆಗೆ ಜಾತಿಯಿಲ್ಲ. ವಿದ್ಯಾರ್ಥಿಗಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರವೂ ಅಗತ್ಯ. ಸಂಸ್ಕಾರವಿಲ್ಲದ ವಿದ್ಯೆ ಸಂಪೂರ್ಣವಾಗುವುದಿಲ್ಲ ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಲು ಶಿಸ್ತು ಹಾಗೂ ಸಂಸ್ಕಾರ ಮುಖ್ಯವೆಂದು ಅವರು ತಿಳಿಸಿದರು.ಕಾರ್ಯಕ್ರಮವನ್ನು ಡಿಸಿಸಿ ಬ್ಯಾಂಕ್ ನಿರ್ದೇಶಕ ಬಸವರಾಜ ಎಸ್. ಪಾಟೀಲ ನರಿಬೋಳ ಉದ್ಘಾಟಿಸಿದರು.
ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ರಾಜ್ಯ ಕಾರ್ಯದರ್ಶಿ ರಾಜಶೇಖರ ಸಾಹುಸಿರಿ ಮಾತನಾಡಿ, ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ನೀಡುವುದು ಶಿಕ್ಷಕರು ಮತ್ತು ಪಾಲಕರ ಪ್ರಮುಖ ಕರ್ತವ್ಯ ಎಂದು ಅವರು ತಿಳಿಸಿದರು.ಜೇವರ್ಗಿ ವೃತ್ತದ ಸಿಪಿಐ ರಾಜೇಸಾಬ್ ನದಾಫ್ ಜ್ಯೋತಿ ಬೆಳಗಿಸಿದರು. ಇದೇ ಸಂದರ್ಭದಲ್ಲಿ ಬಸವರಾಜ ಎಸ್ ಪಾಟೀಲ್ ನರಿಬೋಳ ಹಾಗೂ ಮದರಿ ಗ್ರಾಪಂ ಅಧ್ಯಕ್ಷ ವಿಜಯಕುಮಾರ ಬೆಲ್ಲದ ಅವರಿಗೆ ಸನ್ಮಾನ ನೆರವೇರಿಸಲಾಯಿತು.ಸಮಾರಂಭದಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.
ಸಂಸ್ಥೆಯ ಅಧ್ಯಕ್ಷರಾದ ಹಣಮಂತ್ರಾಯಗೌಡ ಎಸ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಿತು. ಸಂಸ್ಥೆಯ ಆಡಳಿತಾಧಿಕಾರಿ ಮಹಾಲಕ್ಷ್ಮೀ ಎಚ್. ಪಾಟೀಲ ಅವರ ನೇತೃತ್ವದಲ್ಲಿ ಶಿಕ್ಷಕರು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.
ಈ ಸಂದರ್ಭದಲ್ಲಿ ಸಿಪಿಐ ರಾಜೇಸಾಬ್ ನದಾಫ್, ವಿಜಯಕುಮಾರ ಕೆ ಹಿರೇಮಠ,ಶರಣಗೌಡ ಪಾಟೀಲ್ ಯಲಗೋಡ್, ಎಸ್.ಕೆ. ಬಿರಾದಾರ್, ಸಾತಪ್ಪ ಮೇತ್ರಿ, ಗೊಲ್ಲಾಳಪ್ಪ ಯಡ್ರಾಮಿ, ಸಂಗಮೇಶ ಸಂಕಾಲಿ, ಪ್ರಭು ಜಾದವ್, ಸುರೇಶ ಪಾಟೀಲ್ ನೇದಲಗಿ, ಮರೆಪ್ಪ ಬೇಗಾರ್, ಅನೀಲ್ ಪಾಟೀಲ್, ರಾಜಶೇಖರಯ್ಯ ಹಿರೇಮಠ, ಸುರೇಶ ಹಿರೇಮಠ, ಸಿದಲಿಂಗ್ ಚೌದ್ರಿ, ಗುರು ರಾವೂರ್, ವಿಜಯಕುಮಾರ ಬೆಲ್ಲದ್, ಶ್ರೀಕಾಂತ ಬೂದಿಹಾಳ, ರಮೇಶ ಕೊಂಡಗೂಳಿ, ಭಗವಂತ್ರಾಯ ಮದರಿ, ಶಿವು ಚೌಕಾನೂರ ಅರಳಗುಂಡಗಿ, ಭಗವಂತ್ರಾಯ ಗೌನಳ್ಳಿ, ಕೊಣ್ಣೂರ್, ಉಮೇಶ ಪಾಟೀಲ್ ಸೇರಿದಂತೆ ಅನೇಕ ಗಣ್ಯರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಒಳ ಮೀಸಲಾತಿ ಜಾರಿಯಾಗದೆ ಎಸ್‌ಸಿ ಕೋಟಾ ಭರ್ತಿ ಬೇಡ


**ಕಲಬುರಗಿ,ಮಾ.11:**ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಕುರಿತು ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ರಾಜ್ಯ ಸರ್ಕಾರ ಅಂಗೀಕರಿಸಿರುವ ಸಮೀಕ್ಷೆಗೆ ಎಲ್ಲಾ ಪಕ್ಷಗಳ ವಿಧಾನಸಭೆ ಹಾಗೂ ವಿಧಾನ ಪರಿಷತ್ ಶಾಸಕರು ಬೆಂಬಲ ನೀಡಿದ್ದು, ರಾಜ್ಯಪಾಲರಿಂದಲೂ ಅನುಮೋದನೆ ದೊರೆತಿದೆ. ಆದಾಗ್ಯೂ ಕೆಲವು ಗೊಂದಲಗಳಿರುವ ಹಿನ್ನೆಲೆಯಲ್ಲಿ ಒಟ್ಟು 56,432 ಸರ್ಕಾರಿ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಶೇ. 15 ಅಂದರೆ 8,465 ಹುದ್ದೆಗಳನ್ನು ತಾತ್ಕಾಲಿಕವಾಗಿ ತಡೆಹಿಡಿದು, ಉಳಿದ 47,967 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಕ್ಷಣ ಮುಂದುವರಿಸಬೇಕು ಎಂದು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ,ರಾಜ್ಯ ಉಪಾಧ್ಯಕ್ಷ ಕೆ.ಬಿ. ವಾಸು ಅವರು ಆಗ್ರಹಿಸಿದ್ದಾರೆ.



ಕರ್ನಾಟಕದಲ್ಲಿ ಖಾಲಿ ಇರುವ 56,432 ಸರ್ಕಾರಿ ಹುದ್ದೆಗಳ ನೇಮಕಾತಿ ವಿಚಾರದಲ್ಲಿ ರಾಜ್ಯ ಸರ್ಕಾರ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳದೆ ಕಾಲಹರಣ ಮಾಡುತ್ತಿರುವುದು ತೀವ್ರ ಖಂಡನೀಯ. ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುವ ಸರ್ಕಾರವೇ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಪ್ರಶ್ನೆಯಲ್ಲಿ ಮೌನವಾಗಿರುವುದು ಬಹುಜನ ಸಮಾಜಕ್ಕೆ ಮಾಡಿದ ದೊಡ್ಡ ಮೋಸವಾಗಿದೆ.
ಒಟ್ಟು 56,432 ಹುದ್ದೆಗಳಲ್ಲಿ ಜನರಲ್ ಒಬಿಸಿ ಎಸ್ಟಿ ವರ್ಗಗಳಿಗೆ ಸೇರಿದ 47,967 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಕ್ಷಣ ಮುಂದುವರಿಸಬೇಕು. ಆದರೆ ಎಸ್ಸಿ ಗಳಿಗೆ ಮೀಸಲಾದ ಶೇ.15 ಅಂದರೆ 8,465 ಹುದ್ದೆಗಳನ್ನು ಒಳ ಮೀಸಲಾತಿ ಹಾಗೂ ರೋಸ್ಟರ್ ಪಾಯಿಂಟ್‌ಗಳು ನಿಗದಿಯಾದ ನಂತರವೇ ಭರ್ತಿ ಮಾಡಬೇಕು. ಒಳ ಮೀಸಲಾತಿ ಜಾರಿಯಾಗದೆ ಎಸ್ಸಿ ಕೋಟಾ ಹುದ್ದೆಗಳನ್ನು ಭರ್ತಿ ಮಾಡಿದರೆ ಅದು ಪರಿಶಿಷ್ಟ ಜಾತಿಗಳ ಹಕ್ಕುಗಳನ್ನು ಕಸಿದುಕೊಳ್ಳುವ ಕುತಂತ್ರವಾಗುತ್ತದೆ.
ರಾಜ್ಯ ಸರ್ಕಾರ ತಕ್ಷಣ ಈ ವಿಚಾರದಲ್ಲಿ ನ್ಯಾಯಸಮ್ಮತ ನಿರ್ಧಾರ ತೆಗೆದುಕೊಳ್ಳಬೇಕು. ಇಲ್ಲವಾದರೆ ಪರಿಶಿಷ್ಟ ಜಾತಿ ಸಮುದಾಯಗಳು, ಬಹುಜನ ಸಂಘಟನೆಗಳು ಮತ್ತು ಯುವಕರು ಸೇರಿ ರಾಜ್ಯದಾದ್ಯಂತ ತೀವ್ರ ಹೋರಾಟಕ್ಕೆ ಮುಂದಾಗುವ ಅನಿವಾರ್ಯ ಪರಿಸ್ಥಿತಿ ಉಂಟಾಗುತ್ತದೆ ಎಂದಿದ್ದಾರೆ.

# ಕ್ಷುಲ್ಲಕ ಕಾರಣಕ್ಕೆ ಸ್ನೇಹಿತರ ಜಗಳ: ತೇರದಾಳದಲ್ಲಿ ಯುವಕನಿಗೆ ಚಾಕು ಇರಿದು ಕೊಲೆ

**ತೇರದಾಳ :ಮಾ.11**: ತೇರದಾಳ ಪಟ್ಟಣದಲ್ಲಿ ಶುಲ್ಲಕ ಕಾರಣಕ್ಕೆ ಇಬ್ಬರು ಸ್ನೇಹಿತರ ಮಧ್ಯೆ ಆರಂಭವಾದ ಜಗಳ ಕೊಲೆಯಲ್ಲಿ ಅಂತ್ಯವಾದ ದುರ್ಘಟನೆ ನಡೆದಿದೆ. ಪಟ್ಟಣದ ಸಿದ್ದೇಶ್ವರ ದೇವಸ್ಥಾನ ಸಮೀಪ ಈ ಘಟನೆ ನಡೆದಿದ್ದು, ಮೃತ ಯುವಕನನ್ನು 19 ವರ್ಷದ ರಾಹುಲ್ ಸಪ್ತಸಾಗರ್ ಎಂದು ಗುರುತಿಸಲಾಗಿದೆ.
ಆರೋಪಿಯಾಗಿ ಶ್ರೇಯಸ್ ಎಂಬ ಯುವಕನನ್ನು ಗುರುತಿಸಲಾಗಿದೆ. ಮೃತ ರಾಹುಲ್ ಸಪ್ತಸಾಗರ್ ತೇರದಾಳ ಪಟ್ಟಣದ ಅರಳಿಕಟ್ಟಿ ಗಲ್ಲಿಯ ನಿವಾಸಿಯಾಗಿದ್ದು, ಡಿಪ್ಲೋಮಾ ದ್ವಿತೀಯ ವರ್ಷದ ವಿದ್ಯಾರ್ಥಿಯಾಗಿದ್ದನು. ಇಬ್ಬರು ಸ್ನೇಹಿತರ ನಡುವೆ ಆಗಾಗ ಶುಲ್ಲಕ ವಿಚಾರಕ್ಕೆ ಕಿತ್ತಾಟ ಹಾಗೂ ಜಗಳಗಳು ನಡೆಯುತ್ತಿದ್ದವು ಎನ್ನಲಾಗಿದೆ.ಘಟನೆಯ ವೇಳೆ ಜಗಳ ತೀವ್ರಗೊಂಡ ಪರಿಣಾಮ ಶ್ರೇಯಸ್ ಚಾಕು ಇರಿದು ರಾಹುಲ್‌ನ್ನು ಕೊಂದಿರುವ ಶಂಕೆ ವ್ಯಕ್ತವಾಗಿದೆ.
ಈ ಕುರಿತು ಬಾಗಲಕೋಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಪಿ. ಸಿದ್ಧಾರ್ಥ್‌ಗೋಯಲ್ ಮಾಹಿತಿ ನೀಡಿದ್ದು, "ಈ ಘಟನೆ ಹುಡುಗಿ ವಿಚಾರಕ್ಕೆ



ಸಂಬಂಧಿಸಿದ ಕೊಲೆ ಅಲ್ಲ. ಶುಲ್ಲಕ ಕಾರಣದಿಂದ ಆರಂಭವಾದ ಜಗಳವೇ ಕೊಲೆಯಲ್ಲಿ ಅಂತ್ಯವಾಗಿದೆ" ಎಂದು ತಿಳಿಸಿದ್ದಾರೆ. ಬಾಗಲಕೋಟೆ ನಗರದಲ್ಲಿ ಅವರು ಈ ಕುರಿತು ಪ್ರತಿಕ್ರಿಯೆ ನೀಡಿದ್ದಾರೆ.ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಚಿತ್ತಾಪುರ ಮತದಾರ ಪಟ್ಟಿ ಪರಿಷ್ಕರಣೆ ಜಿಲ್ಲೆಯಲ್ಲಿ ಎರಡನೆಯ ಸ್ಥಾನ: ನಾಗಯ್ಯ ಹಿರೇಮಠ್

**ವಾಡಿ,ಮಾ.11**–ಜಿಲ್ಲಾಧಿಕಾರಿಗಳ ಆದೇಶದಂತೆ ವಿಶೇಷ ಮ್ಯಾಪಿಂಗ್ ಅಭಿಯಾನ ಇಂದು ಪ್ರಾರಂಭವಾಗುತ್ತದೆ. ಚಿತ್ತಾಪುರ ಮತಕ್ಷೇತ್ರದಲ್ಲಿ ಒಟ್ಟು 253891 ಮತದಾರರಲ್ಲಿ 241770 ಮತದಾರರ ವಿಶೇಷ ಮಾತಪಟ್ಟಿ ಪರಿಷ್ಕರಣೆ ಮ್ಯಾಪಿಂಗ್ ಮಾಡಲಾಗಿದೆ, ಶೇ 95.23% ಪ್ರಗತಿ ಸಾಧಿಸಿ ಜಿಲ್ಲೆಯಲ್ಲಿ 2ನೇ ಸ್ಥಾನದಲ್ಲಿದೆ.
ಬಾಕಿ ಉಳಿದ 12121 ಮತದಾರರ ಮ್ಯಾಪಿಂಗ್ ಮಾಡಲು ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ. ಆದ್ದರಿಂದ ಮತದಾರರು ನಿಮ್ಮ ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್‌ಓ ) ಅವರಿಗೆ ಭೇಟಿಯಾಗಿ ಮತ್ತು ನಿಮ್ಮ ಮನೆಗೆ ಮತಗಟ್ಟೆ ಅಧಿಕಾರಿಗಳು ಭೇಟಿ ನೀಡಿದಾಗ ಮ್ಯಾಪಿಂಗ್ ಮಾಡಿಕೊಳ್ಳಲು ಚಿತ್ತಾಪುರ ತಾಲ್ಲೂಕಿನ ದಂಡಧಿಕಾರಿ ಹಾಗು ತೆಹಸೀಲ್ದಾರ ನಾಗಯ್ಯ ಹಿರೇಮಠ್ ಅವರು ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಲಿಕೆಯ ನೀರು ಸರಬರಾಜು, ಮೇಲುಸೇತುವೆ ನಿರ್ಮಾಣ ಕುರಿತು ಸದನದಲ್ಲಿ ಧ್ವನಿ ಎತ್ತಿದ ಶಶೀಲ್ ನಮೋಶಿ



**ಕಲಬುರ್ಗಿ:ಮಾ.11:**ಕಲಬುರಗಿ ನಗರದ ಖರ್ಗೆ ಪೆಟ್ರೋಲ್ ಬಂಕ್, ರಾಮ ಮಂದಿರ ವೃತ್ತ, ಹುಮನಾಬಾದ ರಿಂಗ್ ರಸ್ತೆ ಹಾಗೂ ಆಳಂದ ಚೆಕ್ ಪೋಸ್ಟ್ ಈ ನಾಲ್ಕು ಕಡೆ ಮೇಲ್ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ಇದ್ದಲ್ಲಿ ಯಾವಾಗ ಕಾಮಗಾರಿ ಪ್ರಾರಂಭಿಸಿ ಜನರಿಗೆ ಸಂಚಾರ ದಟ್ಟಣೆಯಿಂದ ಯಾವಾಗ ಮುಕ್ತಿ ನೀಡಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ ನಮೋಶಿ ಇಂದು ವಿಧಾನ ಪರಿಷತ್ ಅಧೀವೇಶನದಲ್ಲಿ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರಾದ ಮಾನ್ಯ ಸಿ ಎಸ್ ಸುರೇಶ್ ಅವರಿಗೆ ಪ್ರಶ್ನಿಸಿದರು ಚುಕ್ಕೆ ಗುರುತಿನ ಈ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ 2020-21 ಸಾಲಿನ ಪ್ರಾದೇಶಿಕ ನಿಧಿ ಅಡಿಯಲ್ಲಿ ಹಾಗೂ 2021-। 22ನೇ ಸಾಲಿನ ಕಲಬುರಗಿ ಜಿಲ್ಲೆಯ ಮ್ಯಾಕ್ರೋ ಯೋಜನೆಯಡಿ । ಕಲಬುರಗಿ ನಗರದ ಸೇಡಂ ರಿಂಗ್ ರಸ್ತೆಯಲ್ಲಿ ಫ್ಲೈ ಓವರ್ ಕಾಮಗಾರಿಗೆ ಅನುಮೋದನೆ ನೀಡಿ ಆದೇಶಿಸಲಾಗಿದೆ. ಆದರೆ, ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯದಲ್ಲಿ ವ್ಯಾಜ್ಯ ಇರುವುದರಿಂದ ಕಾಮಗಾರಿಯನ್ನು ಪೂರ್ಣಗೊಳಿಸಿಲು ಸಾಧ್ಯವಾಗುತ್ತಿಲ್ಲ. ಇನ್ನುಳಿದಂತೆ, ರಾಮ ಮಂದಿರ ವೃತ್ತ, ಹುಮನಾಬಾದ ರಿಂಗ್ ರಸ್ತೆ ಹಾಗೂ ಆಳಂದ ಚೆಕ್ ಪೋಸ್ಟ್ ಕಡೆ ಮೇಲ್ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ ಎಂದು ಉತ್ತರಿಸಿದರು. ನಂತರ ವಿಧಾನ ಪರಿಷತ್ ಸದಸ್ಯ ಸುನಿಲ್ ವಲ್ಯಾಪೂರೆಯವರ ಚುಕ್ಕೆ ಗುರುತಿನ ಪ್ರಶ್ನೆಯನ್ನು ಅವರ ಅನುಪಸ್ಥಿತಿಯಲ್ಲಿ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ ನಮೋಶಿಯವರು ಸಚಿವರಿಗೆ ಪ್ರಶ್ನಿಸಿ

ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ನಿರಂತರ ನೀರಿನ ಸರಬರಾಜು ಕಾಮಗಾರಿ ನಡೆಯುತ್ತಿದ್ದು ಎಲ್ ಅಂಡ್ ಟಿ ಕಂಪನಿ ಗುತ್ತಿಗೆ ಪಡೆದಿದ್ದು ಸದರಿ ಕಾಮಗಾರಿಯ ಬಹಳ ವರ್ಷಗಳಿಂದ ಪೂರ್ಣವಾಗದೆ ಉಳಿದಿರುಲು ಕಾರಣವೇನು ಮತ್ತು ಈ ಕಾಮಗಾರಿಗೆ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು ಬಳಕೆಯಾದ ಅನುದಾನ ಎಷ್ಟು ಈ ಕಾಮಗಾರಿಯು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; ಇನ್ನು ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ;ಸಂಪೂರ್ಣ ಮಾಹಿತಿ ದಾಖಲೆಯೊಂದಿಗೆ ನೀಡಬೇಕೆಂದು ಕೇಳಿದರು. ಇದಕ್ಕೆ ಉತ್ತರಿಸಿದ ಸಚಿವರು ಈ ಕಾಮಗಾರಿಯ ಕೆಲವು ಕಾರಣಗಳಿಂದ ವಿಳಂಬವಾಗಿದೆ.ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿದ್ದು, ಭೌತಿಕವಾಗಿ ಶೇ.55% ರಷ್ಟು ಹಾಗೂ ಆರ್ಥಿಕವಾಗಿ ಶೇ.40 ರಷ್ಟು ವೆಚ್ಚ ಮಾಡಲಾಗಿದೆ.

ಈ ಯೋಜನೆಯ ನಿರ್ಮಾಣ ಕಾಮಗಾರಿಗೆ ಸರ್ಕಾರದಿಂದ ರೂ.604.95 ಕೋಟಿಗೆ ಮಂಜೂರಾಗಿದ್ದು, ಇದೂವರೆಗೆ ರೂ.241.90 ಕೋಟಿ ವೆಚ್ಚವಾಗಿರುತ್ತದೆ.

ಕರಾರಿನ ನಿಯಮಾನುಸಾರ ನಿರ್ದಿಷ್ಟ ಪ್ರಗತಿ ಸಾಧಿಸದ ಕಾರಣ. ಗುತ್ತಿಗೆದಾರರ ವಿಳಂಬಕ್ಕೆ ಕರಾರಿನ ನಿಯಮಾನುಸಾರ ರೂ.60.5 ಕೋಟಿ ದಂಡವನ್ನು ವಿಧಿಸಿದೆ.ಎಂದು ಉತ್ತರಿಸಿದ ಸಚಿವರು ಸಂಪೂರ್ಣ ಮಾಹಿತಿಯನ್ನು ಲಿಖಿತ ರೂಪದಲ್ಲಿ ಒದಗಿಸಿದರು.

# ತನಿಖೆಗೆ ಲೋಕಾಯುಕ್ತಕ್ಕೆ ಹೈಕೋರ್ಟ್ ಆದೇಶ



**ಬೀದರ್:ಮಾ.11:** ಅಂಗನವಾಡಿಗಳಿಗೆ ಆಹಾರ ಪೂರೈಸುವಲ್ಲಿ ಔರಾದ್ ಶಾಸಕ ಪ್ರಭು ಚವಾಣ್ ನಡೆಸಿದ್ದಾರೆ ಎನ್ನಲಾದ ಭ್ರಷ್ಟಾಚಾರ ಪ್ರಕರಣದ ಕುರಿತು ತನಿಖೆ ನಡೆಸುವಂತೆ ಕಲಬುರಗಿ ಹೈಕೋರ್ಟ್ ಪೀಠವು ಲೋಕಾಯುಕ್ತಕ್ಕೆ ಆದೇಶ ನೀಡಿದೆ.

ಔರಾದನ ಮುಖಂಡ ದೀಪಕ್ ಪಾಟೀಲ ಚಾಂದೋರಿ ಅವರು ಸಲ್ಲಿಸಿದ ರಿಟ್ ಅರ್ಜಿ ಸಂಖ್ಯೆ 200464-2026 ರ ವಿಚಾರಣೆ ನಡೆಸಿದ ನ್ಯಾಯಾಧೀಶ ಎಸ್. ವಿಶ್ವಜೀತ್ ಶೆಟ್ಟಿ ಅವರು ಮಾ. 5 ರಂದು ಈ ಕುರಿತು ಆದೇಶ ಹೊರಡಿಸಿದ್ದಾರೆ.

ಭ್ರಷ್ಟಾಚಾರದ ದೂರಿನ ಸಂಬಂಧ ಒಂದು ತಿಂಗಳೊಳಗೆ ಕಾನೂನು ರೀತ್ಯ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

ದೀಪಕ್ ಪಾಟೀಲ ಚಾಂದೋರಿ ಅವರ ಪರವಾಗಿ ವಕೀಲ ಸಿದ್ರಾಮೇಶ್ವರ ಪಾಟೀಲ ವಾದ ಮಂಡಿಸಿದ್ದರು.

ಔರಾದ್ ಕ್ಷೇತ್ರದ ಅಂಗನವಾಡಿಗಳಿಗೆ ಪೌಷ್ಟಿಕ ಆಹಾರ ಪೂರೈಸುವ ಟೆಂಡರ್ ಕೊಡಿಸಿದ್ದಕ್ಕೆ ಪ್ರತಿಯಾಗಿ ಔರಾದ್ ಶಾಸಕರು ಸುಂದ್ರಮ್ಮ ಟ್ರೇಡಿಂಗ್ ಕಂಪನಿಯಿಂದ ರೂ. 1 ಕೋಟಿ ಲಂಚ ಪಡೆದಿದ್ದಾರೆ. ಹೀಗಾಗಿ ಪ್ರಕರಣದ ತನಿಖೆ ನಡೆಸಿ ಅದರಲ್ಲಿ ಶಾಮೀಲಾದ ಅಧಿಕಾರಿಗಳು, ಸುಂದ್ರಮ್ಮ ಟ್ರೇಡಿಂಗ್ ಕಂಪನಿ ಹಾಗೂ ಶಾಸಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದೀಪಕ್ ಪಾಟೀಲ ಚಾಂದೋರಿ ಅವರು 10-11-2025 ರಂದು ಲೋಕಾಯುಕ್ತ ಎ.ಡಿ.ಜಿ.ಪಿ. ಹಾಗೂ ಬೀದರ್ ಡಿ.ವೈ.ಎಸ್.ಪಿ.ಗೆ ದೂರು ಸಲ್ಲಿಸಿದ್ದರು.

ದೂರಿನ ಕುರಿತು ಲೋಕಾಯುಕ್ತ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದ ಕಾರಣ ದೀಪಕ್ ಪಾಟೀಲ ಚಾಂದೋರಿ ಅವರು 2026 ಫೆಬ್ರುವರಿ 2 ರಂದು ಕಲಬುರಗಿ ಹೈಕೋರ್ಟ್ ಪೀಠದ ಮೊರೆ ಹೋಗಿದ್ದರು.

ಆದೇಶದಿಂದ ಸಮಾಧಾನ: ಕಲಬುರಗಿ ಹೈಕೋರ್ಟ್ ಪೀಠದ ಆದೇಶದಿಂದ ಸಮಾಧಾನವಾಗಿದೆ. ನ್ಯಾಯಾಂಗ ವ್ಯವಸ್ಥೆಯ ಮೇಲೆ ಗೌರವ ಮತ್ತಷ್ಟು ಹೆಚ್ಚಾಗಿದೆ. ಪ್ರಕರಣದಲ್ಲಿ ಸತ್ಯಕ್ಕೆ ಜಯ ಸಿಗಲಿದೆ ಎಂದು ದೀಪಕ್ ಪಾಟೀಲ ಚಾಂದೋರಿ ಪ್ರತಿಕ್ರಿಯಿಸಿದ್ದಾರೆ.

ಶಾಸಕರು ಅಂಗನವಾಡಿ ಆಹಾರ ಪೂರೈಕೆಯಲ್ಲಿ ಲಂಚ ಪಡೆದಿರುವ ಬಗ್ಗೆ ತಾವು ಮಾಡಿರುವ ಆರೋಪ ನೂರಕ್ಕೆ ನೂರರಷ್ಟು ಸತ್ಯವಾಗಿದೆ. ಸುಂದ್ರಮ್ಮ ಟ್ರೇಡಿಂಗ್ ಕಂಪನಿ ತನ್ನ ಖಾತೆಯಿಂದ ಶಾಸಕರ ಮಾಲೀಕತ್ವದ ಮುಂಬೈನ ಪ್ರಭು ಎಂಟರ್‌ಪ್ರೈಸೆಸ್ ಖಾತೆಗೆ ರೂ. 1 ಕೋಟಿ ಲಂಚದ ಹಣ ಜಮಾ ಮಾಡಿದೆ. ಖಾತೆ ಪರಿಶೀಲಿಸಿದರೆ ಭ್ರಷ್ಟಾಚಾರ ಬಯಲಾಗಲಿದೆ ಎಂದು ಹೇಳಿದ್ದಾರೆ.

ಮೊದಲು ಅಂಗನವಾಡಿ ಆಹಾರ ಪೂರೈಕೆ ಗುತ್ತಿಗೆಗೆ ಟೆಂಡರ್ ಇರಲಿಲ್ಲ. ಶಾಸಕರು ಶಿಫಾರಸು ಮಾಡಿದವರಿಗೆ ಸರಬರಾಜು ಆದೇಶ ಕೊಡಲಾಗುತ್ತಿತ್ತು. ಶಾಸಕರು 2018 ರಿಂದ 2023 ರ ವರೆಗೆ ಹಾಗೆಯೇ ತಮ್ಮ ಆಪ್ತರ ಸುಂದ್ರಮ್ಮ ಟ್ರೇಡಿಂಗ್ ಕಂಪನಿಗೆ ಸರಬರಾಜು ಆದೇಶ ಕೊಡಿಸಿದ್ದರು. ಅದಕ್ಕೆ ಪ್ರತಿಯಾಗಿ ಪ್ರತಿ ತಿಂಗಳು ಕಂಪನಿಗೆ ಹಣ ನಿಗದಿಪಡಿಸಿ, ನಗದು ರೂಪದಲ್ಲಿ ಪಡೆದಿದ್ದರು. ಅನಂತರ ಖಾತೆಗೆ ಹಣ ವರ್ಗಾವಣೆ ಮಾಡಿಸಿಕೊಂಡಿದ್ದರು ಎಂದು ಆರೋಪಿಸಿದ್ದಾರೆ.

ಸುಂದ್ರಮ್ಮ ಟ್ರೇಡಿಂಗ್ ಕಂಪನಿ ವಾರ್ಷಿಕ ರೂ. 6 ಕೋಟಿ ಮೌಲ್ಯದ ಪೌಷ್ಟಿಕ ಆಹಾರ ಪೂರೈಸುತ್ತಿದೆ. ಕಂಪನಿ ಹಾಗೂ ಶಾಸಕರ ಮಧ್ಯದ ಒಪ್ಪಂದ ಹಾಗೂ ಭ್ರಷ್ಟಾಚಾರದಿಂದಾಗಿ ಔರಾದ್ ಕ್ಷೇತ್ರದ ಅಂಗನವಾಡಿ ಮಕ್ಕಳಿಗೆ ಕಳಪೆ ಮಟ್ಟದ ಆಹಾರ ದೊರೆಯುತ್ತಿದೆ. ಮುಗ್ಧ ಮಕ್ಕಳ ಆಹಾರದಲ್ಲೂ ಭ್ರಷ್ಟಾಚಾರ ಎಸಗಿರುವವರಿಗೆ ಮಕ್ಕಳ ಶಾಪ ತಟ್ಟಲಿದೆ ಎಂದು ಹೇಳಿದ್ದಾರೆ. ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಆಗುವವರೆಗೂ ತಮ್ಮ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದ್ದಾರೆ.

## ಒಳಮೀಸಲಾತಿ : ಸರ್ಕಾರದಿಂದ ಅನ್ಯಾಯ ಚಿಗರಳ್ಳಿ ಕ್ರಾಸ್ ಬಳಿ ಹೆದ್ದಾರಿ ತಡೆ ನಡೆಸಿ ಪ್ರತಿಭಟನೆ




**ಜೇವರಗಿ,ಮಾ.11:** ಪರಿಶಿಷ್ಟ ಜಾತಿಯ ಒಳಮೀಸಲಾತಿ ವಿಚಾರ ಪೂರ್ಣಪ್ರಮಾಣದಲ್ಲಿ ಜಾರಿಗೊಳಿಸುವ ಮೊದಲೇ ವಿವಿಧ ಇಲಾಖೆಗಳ ಹುದ್ದೆಗಳ ನೇಮಕಾತಿಗೆ ಮುಂದಾಗಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ತಾಲ್ಲೂಕಿನ ಮಾದಿಗ ಸಮಾಜದ ವಿವಿಧ ಪ್ರಗತಿಪರ ಸಂಘಟನೆಗಳ ಒಕ್ಕೂಟ ಜೇವರ್ಗಿ-ಯಡ್ರಾಮಿ ಘಟಕದ ವತಿಯಿಂದ ತಾಲ್ಲೂಕಿನ ಚಿಗರಳ್ಳಿ ಕ್ರಾಸ್ ಬಳಿ ಬೀದರ-ಬೆಂಗಳೂರು ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸಲಾಯಿತು.

ರಾಷ್ಟ್ರೀಯ ಹೆದ್ದಾರಿ ಮೇಲೆ ನೂರಾರು ಜನ ಮಾದಿಗ ಸಮಾಜದ ಬಾಂಧವರು ಜಮಾಯಿಸಿ ಸರ್ಕಾರ ಹಾಗೂ ಮುಖ್ಯಮಂತ್ರಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು.

ಸಂಘಟನೆಯ ಪ್ರಮುಖ ಪರಶುರಾಮ ಮುದಬಾಳ ಮಾತನಾಡಿ, ಶೈಕ್ಷಣಿಕ ಸಂಸ್ಥೆಗಳು ಹಾಗೂ ರಾಜ್ಯಾದ್ಯಂತ ಖಾಲಿ ಹುದ್ದೆಗಳನ್ನು ಭರ್ತಿಗೆ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಂಡಿರುವುದು ಗೊತ್ತಾಗಿದೆ. ಆದರೆ ಸಚಿವ ಸಂಪುಟದ ತೀರ್ಮಾನದಂತೆ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಯಾಗುವವರೆಗೆ ಹೊಸ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಬಾರದು ಎಂದು 2024ರ ನವೆಂಬರ್ 25ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸುತ್ತೋಲೆ ಹೊರಡಿಸಿದೆ. ವಸ್ತುಸ್ಥಿತಿ ಹೀಗಿದ್ದರೂ ಹೊಸದಾಗಿ ನೇಮಕಾತಿ ಪ್ರಕ್ರಿಯೆ ಆರಂಭಿಸುವುದು ಮಾದಿಗ ಸಮುದಾಯಕ್ಕೆ ಸರ್ಕಾರ ದ್ರೋಹ ಬಗೆಯುತ್ತಿದೆ ಎಂದು ಆರೋಪಿಸಿದರು. ಸಮಾಜ ಕಲ್ಯಾಣ ಇಲಾಖೆಯನ್ನು ಸಮರ್ಪಕವಾಗಿ ನಿಭಾಯಿಸುವಲ್ಲಿ ವಿಫಲರಾಗಿರುವ ಸಚಿವ ಎಚ್.ಸಿ. ಮಹಾದೇವಪ್ಪ ಅವರನ್ನು ಸಂಪುಟದಿಂದ ಕೈಬಿಡಬೇಕು. ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು.ನಂತರ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಪ್ರಮುಖರಾದ ಮಲ್ಲಿಕಾರ್ಜುನ ದಿನ್ನಿ, ಚಂದ್ರು ಕೋರೆ, ಭೀಮರಾಯ ಯಡ್ರಾಮಿ, ಸುಭಾಷ ಕಾಂಬಳೆ, ಭಾಗಪ್ಪ ಯಲಗೋಡ, ಗೊಲ್ಲಾಳಪ್ಪ ಬಿಳವಾರ, ಗಂಗಾಧರ ವರ್ಚನಳ್ಳಿ, ವಿಜಯಲಕ್ಷ್ಮಿ ಆಂದೋಲಾ, ಸೈದಪ್ಪ ಇಜೇರಿ, ಶೇಖಪ್ಪ ತಳಗೇರಿ, ಭೀಮರಾಯ ಹಳ್ಳಿ, ಶಿವು ಹಂಗರಗಿ, ಬಸವರಾಜ ಕುಸುಮಾಕರ್, ರಾಹುಲ್ ಕಾಚಾಪೂರ, ಶರಣು ಹರನೂರ, ನಾಗು ಅರಳಗುಂಡಗಿ, ಈರಣ್ಣ ವರವಿ, ಗೊಲ್ಲಾಳಪ್ಪ ಹಂಗರಗಾ, ಪರಶು ಆಲಳಕರ್, ರಾಜು ದೊಡ್ಡಮನಿ, ಹಣಮಂತ ಬಿರಾಳ, ದೇವಿಂದ್ರ ದೊಡ್ಡಮನಿ, ಹುಷೇನಪಟೇಲ ಮಾಲಿಪಟೇಲ ಮುದಬಾಳ ಬಿ, ದೇವಿಂದ್ರ ಬಿಳವಾರ, ಖಾಜಾಪೀರ ಚಿಗರಳ್ಳಿ, ಮಹೇಶ ಬಂಡೆ, ಮುತ್ತಣ್ಣ ಬಿಲ್ಲಾಡ, ಭೀಮರಾಯ ವಾಲಿಕಾರ್. ಮಲ್ಲಣ್ಣ ನರಿಬೋಳ, ಅಯ್ಯಣ್ಣ ಯಾಳವಾರ,ಮಲ್ಲು ಗುಡೂರ, ಸೇರಿದಂತೆ ಅನೇಕರು ಹಾಜರಿದ್ದರು.

# ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ಮಾಡಿರಿ ಇಲ್ಲವೇ ಭೂಮಿಯನ್ನು ರೈತರಿಗೆ ಹಿಂದಿರುಗಿಸಿ : ವೈ.ಎಂ. ಸತೀಶ್



**ಬೆಂಗಳೂರು, ಮಾ. 11:** ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುತ್ತೀರೋ ಇಲ್ಲವೋ ಸ್ಪಷ್ಟಪಡಿಸಿ. ಇಲ್ಲವಾದಲ್ಲಿ ಅರ್ಸಲ್ಲರ್ ಮಿತ್ತಲ್, ವಿಮಾನ ನಿಲ್ದಾಣಕ್ಕಾಗಿ ಸ್ವಾಧೀನಕ್ಕೆ ಪಡೆದಿರುವ ಭೂಮಿಯನ್ನು ರೈತರಿಗೇ ಹಿಂದಿರುಗಿಸಿ ಎಂದು ವಿಧಾನಪರಿಷತ್ ಸದಸ್ಯರಾದ ವೈ.ಎಂ. ಸತೀಶ್ ಅವರು ಆಗ್ರಹಿಸಿದ್ದಾರೆ.

ವಿಧಾನಪರಿಷತ್ತಿನ ಬಜೆಟ್ ಅಧಿವೇಶದಲ್ಲಿ ಮಂಗಳವಾರ, ಬಳ್ಳಾರಿ ವಿಮಾನ ನಿಲ್ದಾಣಕ್ಕೆ ಭೂ ಸ್ವಾಧೀನ ಮಾಡಿಕೊಂಡಿರುವ ವಿಷಯ ಪ್ರಸ್ತಾಪಿಸಿ, ಅಧಿಕಾರಿಗಳು ರಸ್ತೆಗೆ ಭೂಮಿಯನ್ನು ಸ್ವಾಧೀನ ಮಾಡಿಕೊಂಡಿಲ್ಲ. ಅಧಿಕಾರಿಗಳು ಮತ್ತು ಸರ್ಕಾರದ ಮಧ್ಯೆ ಯಾವ ರೀತಿಯಲ್ಲಿ ಕೆಲಸ ನಡೆಯುತ್ತಿದೆ ಎನ್ನಲು ಇದು ಉತ್ತಮವಾದ ಸಾಕ್ಷಿ. ರಸ್ತೆ ಇಲ್ಲದೇ ವಿಮಾನ ನಿಲ್ದಾಣಕ್ಕಾಗಿ ಭೂ ಸ್ವಾಧೀನ ಮಾಡಿಕೊಂಡ ಅಧಿಕಾರಿಗೆ ಗೌರವ ಸನ್ಮಾನ ಮಾಡಬೇಕು ಎಂದು ವ್ಯಂಗ್ಯವಾಡಿದರು.

ಆಗ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಎಂ.ಬಿ. ಪಾಟೀಲ್ ಅವರು, ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಗಳಿಂದಲೂ ವಿಮಾನ ನಿಲ್ದಾಣಕ್ಕಾಗಿ ಬೇಡಿಕೆ ಬಂದಿದೆ. ಕಾರಣ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಯ ಜನಪ್ರತಿನಿಧಿಗಳ ಸಭೆಯನ್ನು ಶೀಘ್ರದಲ್ಲೇ ಏರ್ಪಡಿಸಿ, ವಿಮಾನ ನಿಲ್ದಾಣವನ್ನು ಎಲ್ಲಿ ನಿರ್ಮಾಣ ಮಾಡಲಾಗುತ್ತದೆ ಎನ್ನುವ ಸ್ಪಷ್ಟ ನಿರ್ಧಾರವನ್ನು ಕೈಗೊಳ್ಳಲಾಗುತ್ತದೆ. ಆ ನಂತರವೇ, ಬಳ್ಳಾರಿಯಲ್ಲಿ ವಿಮಾನ ನಿಲ್ದಾಣ ಪ್ರಾರಂಭಿಸುವ ಕುರಿತು ಸ್ಪಷ್ಟವಾಗಿ ಹೇಳಲು ಸಾಧ್ಯ ಎಂದರು.

ಬಳ್ಳಾರಿಯಲ್ಲಿ ಪಿಪಿಪಿ ಮಾದರಿಯಲ್ಲಿ ವಿಮಾನ ನಿಲ್ದಾಣವನ್ನು ನಿರ್ಮಾಣ ಮಾಡಲು ಮಾರ್ಗ್ ಶ್ರೀ ಕೃಷ್ಣದೇವರಾಯ ಏರ್ಪೋರ್ಟ್ ಪ್ರೈವೇಟ್ ಲಿಮಿಟೆಡ್ಗೆ 03.08.2010ರಲ್ಲಿ ಲೆಟರ್ ಆಫ್ ಅವಾರ್ಡ್ (ಕಾಮಗಾರಿ ಪ್ರಾರಂಭಿಸಲು) ಪತ್ರ ನೀಡಲಾಗಿ, 06.08.2010 ರಂದು ಯೋಜನಾ ಅಭಿವೃದ್ಧಿ ಒಪ್ಪಂದಕ್ಕಾಗಿ ಸರ್ಕಾರ ಮತ್ತು ಕಂಪನಿ ಒಪ್ಪಂದಕ್ಕೆ ಸಹಿ ಹಾಕಲಾಗಿತ್ತು. ಆದರೆ, ಕಂಪನಿಯು ಕಾಮಗಾರಿಯನ್ನು ಪ್ರಾರಂಭಿಸದ ಕಾರಣ ಭೂಮಿಯನ್ನು ಕಂಪನಿಗೆ ಹಸ್ತಾಂತ ಮಾಡದೇ, ಒಪ್ಪಂದವನ್ನು ರದ್ದು ಮಾಡಲಾಯಿತು ಎಂದು ಅವರು ಉತ್ತರಿಸಿದರು.

ಬಳ್ಳಾರಿ ವಿಮಾನ ನಿಲ್ದಾಣವನ್ನು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ ಮೂಲಕ ನಿರ್ಮಾಣ ಮಾಡಲು ಡಿಪಿಆರ್ ಸಿದ್ದಪಡಿಸಲು ಸಮಾಲೋಚಕರನ್ನು ನೇಮಕ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದು ಅವರು ಹೇಳಿದರು.

ಆಗ, ವೈ.ಎಂ. ಸತೀಶ್ ಅವರು, ಬಳ್ಳಾರಿ ವಿಮಾನ ನಿಲ್ದಾಣ ಸೇರಿ, ಕುಡತಿನಿಯ ಆರ್ಸಲರ್ ಮಿತ್ತಲ್ಗಾಗಿ ಸ್ವಾಧೀನ ಮಾಡಿಕೊಂಡಿರುವ ಭೂಮಿಯಲ್ಲಿ, ಉದ್ದೇಶಿತ ಯೋಜನೆ ಬರದೇ ಇದ್ದಲ್ಲಿ, ಆ ಭೂಮಿಯನ್ನು ರೈತರಿಗೇ ಹಿಂದಿರುಗಿಸಿ. ಇಲ್ಲವಾದಲ್ಲಿ ಇದು ಬಿಳಿ ಆನೆ ಆಗಲಿದೆ ಎಂದು ಆಗ್ರಹಿಸಿದರು.

ಆಗ ಸಚಿವ ಎಂ.ಬಿ. ಪಾಟೀಲ್ ಅವರು, ಸ್ವಾಧೀನ ಮಾಡಿಕೊಂಡಿರುವ ಭೂಮಿಗೆ ಪರಿಹಾರ ನೀಡಿರುವ ಕಾರಣ ಆ ಭೂಮಿಯನ್ನು ರೈತರಿಗೆ ಹಿಂದಿರುಗಿಸಲು ಸಾಧ್ಯವಿಲ್ಲ. ಬಳ್ಳಾರಿ ವಿಮಾನ ನಿಲ್ದಾಣದ ರಸ್ತೆಗೆ ಅಗತ್ಯವಾಗಿರುವ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳಲಾಗುತ್ತದೆ. ಯಾವುದೇ ಕಾರಣಕ್ಕೂ ಬಿಳಿ ಆನೆ ಆಗಲು ಬಿಡುವುದಿಲ್ಲ. ಬೇರೆ ಉದ್ದೇಶಗಳಿಗೆ ಭೂಮಿಯನ್ನು ಬಳಕೆ ಮಾಡಿಕೊಳ್ಳಲಾಗುತ್ತದೆ ಎಂದು ಹೇಳಿದರು.

ಬಳ್ಳಾರಿಯ ಸಿರಿವಾರ ಗ್ರಾಮದ ವ್ಯಾಪ್ತಿಯಲ್ಲಿ 2009 ರಲ್ಲಿ ರೈತರ ಮತ್ತು ವಿವಿಧ ಪಕ್ಷಗಳ ತೀವ್ರ ವಿರೋಧದ ಮಧ್ಯೆ 900 ಎಕರೆ ಭೂಮಿಯನ್ನು ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ಕರ್ನಾಟಕ ಸರ್ಕಾರ ಭೂ ಸ್ವಾಧೀನ ಮಾಡಿಕೊಂಡಿದ್ದನ್ನು ಸ್ಮರಿಸಬಹುದು.

# ಅಂಬೇಡ್ಕರ್ ಸಮ್ಮೇಳನ ಹೆಸರಲ್ಲಿ ಅನುದಾನ ದುರ್ಬಳಕೆ: ಭಂತೆ ಧಮ್ಮನಾಗ



**ಬೀದರ:ಮಾ.11:** ಮಾರ್ಚ್ 14 ಮತ್ತು 15 ರಂದು ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜನೆ ಮಾಡಲಾಗಿದೆ ಎನ್ನಲಾಗುತ್ತಿರುವ ಅಂಬೇಡ್ಕರ್ ಅವರ ಕುರಿತಾದ ವಿಚಾರಗಳ ಅಂತರಾಷ್ಟ್ರೀಯ ಸಮ್ಮೇಳನಕ್ಕಾಗಿ ಸರ್ಕಾರ ರೂ. 70 ಲಕ್ಷ ಅನುದಾನ ಬಿಡುಗಡೆ ಮಾಡಿದೆ. ಆದರೆ ಇದುವರೆಗೆ ಸಮ್ಮೇಳನದ ಮಾಹಿತಿಯನ್ನು ಬಹಿರಂಗಪಡಿಸದೆ ಅನುದಾನ ದುರ್ಬಳಕೆ ಮಾಡಿಕೊಳ್ಳುವ ಹುನ್ನಾರ ನಡೆದಿದೆ ಎಂದು ಬಸವಕಲ್ಯಾಣ ತಾಲೂಕಿನ ಹತ್ಯಾಳದ ಕರ್ನಾಟಕ ಶರಣ್ ಬಹುದೇಶಿಯ ಸೇವಾಭಾವಿ ಸಂಸ್ಥೆಯ ಅಧ್ಯಕ್ಷ ಮತ್ತು ಅಂತರಾಷ್ಟ್ರೀಯ ಬೌದ್ಧ ಭಿಕ್ಕು ಸಂಘದ ಉಪಾಧ್ಯಕ್ಷ ಭಂತೆ ಧಮ್ಮನಾಗ ಆರೋಪಿಸಿದರು.

ಈ ಕುರಿತು ಮಂಗಳವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಬೀದರ ನಗರದಲ್ಲಿ "ಡಾ. ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಸಮಕಾಲೀನ ಪರಿಹಾರಗಳು" ಕುರಿತು ಅಂತರಾಷ್ಟ್ರೀಯ ಸಮ್ಮೇಳನ ಆಯೋಜನೆಗಾಗಿ 2023 ರಿಂದ ನಿರಂತರವಾಗಿ ನಾನು ಪ್ರಯತ್ನ ಮಾಡುತ್ತ ಬಂದಿದ್ದೇನೆ. ಹೀಗಾಗಿ ಸರ್ಕಾರವು ಅಂಬೇಡ್ಕರ್ ಸಂಶೋಧನಾ ಕೇಂದ್ರದ ವತಿಯಿಂದ ರೂ. 70 ಲಕ್ಷ ಅನುದಾನವನ್ನು ಕಳೆದ 2025ರ ಸೆಪ್ಟೆಂಬರ್ ತಿಂಗಳಿನಲ್ಲಿ ಬಿಡುಗಡೆ ಕೂಡಾ ಮಾಡಿದೆ. ಆದರೆ ನನಗೆ ಹಾಗೂ ಅಂಬೇಡ್ಕರವಾದಿ ಸಂಘ-ಸಂಸ್ಥೆಗಳಿಗೆ ಮಾಹಿತಿ ನೀಡದೆ, ಯಾವುದೇ ಪೂರ್ವಭಾವಿ ಸಭೆ ಮಾಡದೆ, ಸಮ್ಮೇಳನದ ಯಶಸ್ವಿಗಾಗಿ ಇ-ಟೆಂಡರಿಂಗ್ ಕರೆಯದೆ, ಸಮಿತಿ ಉಪಸಮಿತಿಗಳನ್ನು ರಚನೆ ಮಾಡದೆ ತರಾತುರಿಯಲ್ಲಿ ನಾಲ್ಕೇ ದಿನದಲ್ಲಿ ಅಂತರಾಷ್ಟ್ರೀಯ ಸಮ್ಮೇಳನ ಮಾಡಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಅನುದಾನ ದುರ್ಬಳಕೆ ಮಾಡಿಕೊಳ್ಳುವ ಹುನ್ನಾರ ಮಾಡುತ್ತಿದ್ದಾರೆ. ಆದ್ದರಿಂದ ಕೂಡಲೇ ಸಮ್ಮೇಳನವನ್ನು ಎರಡು ತಿಂಗಳು ಮುಂದೂಡಬೇಕು. ಅಂತರಾಷ್ಟ್ರೀಯ ಮಟ್ಟದ ಅತಿಥಿಗಳನ್ನು ಬೀದರ ನಗರಕ್ಕೆ ಕರೆಸಿ ಡಾ. ಬಾಬಾ ಸಾಹೇಬರ ವಿಚಾರಧಾರೆಗಳನ್ನು ವಿಶ್ವಮಟ್ಟದಲ್ಲಿ ತಿಳಿಸುವ ಪ್ರಯತ್ನ ಮಾಡಬೇಕು. ನಾನು ಈಗಾಗಲೇ ಜಪಾನ್, ಜರ್ಮನಿ, ಸೌಥ್ ಆಫ್ರಿಕಾ, ಲಂಡನ್ ಹಾಗೂ ರಷ್ಯಾ ದೇಶದ ಅತಿಥಿಗಳನ್ನು ಆಹ್ವಾನ ಮಾಡಿದ್ದೆ. ಸಮ್ಮೇಳನದ ಆಯೋಜನೆಗಾಗಿ ಹಗಲಿರುಳು ಶ್ರಮಿಸಿದ್ದೇನೆ. ಆದರೆ ಇದುವರೆಗೆ ಆಮಂತ್ರಣ ಪತ್ರಿಕೆ, ಕಟೌಟ್‌ಗಳು, ಬ್ಯಾನರ್‌ಗಳು ಹಾಗೂ ಪ್ರಚಾರ ಕಾರ್ಯ ಮಾಡದೆ ಸಮ್ಮೇಳನದ ಆಶಯಗಳನ್ನು ಹಾಗೂ ಡಾ. ಬಾಬಾ ಸಾಹೇಬ್ ಅಂಬೇಡ್ಕರ ಅವರ ಚಿಂತನೆಗಳನ್ನು ಗಾಳಿಗೆ ತೂರುವ ಕಾರ್ಯ ಮಾಡುತ್ತಿರುವ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಸಮಾಜದ ಮುಖಂಡರು ಕುರುಡ ಕಿವುಡರಾಗಿ ಕುಳಿತುಕೊಳ್ಳದೆ ಹೋರಾಟ ಮಾಡಬೇಕಾಗಿದೆ. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಮಾಡಲಾಗುವುದು ಎಂದು ಭಂತೆಜಿ ಎಚ್ಚರಿಕೆ ನೀಡಿದರು.

ಮುಂದುವರೆದು ಮಾತನಾಡಿದ ಭಂತೆಜಿಯವರು ಅತಿಥಿಗಳ ಆಹ್ವಾನ, ವಸತಿ ವ್ಯವಸ್ಥೆ, ಗೌರವಧನ, ಪ್ರಯಾಣದರದಂತಹ ನಿರ್ಣಾಯಕ ಸೇವೆಗಳಿಗೆ ಇ ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಲ್ಲ. ಪ್ರಶಸ್ತಿಗಳು ಒಂದೇ ಕಂಪನಿಗೆ ಅಥವಾ ಬಹು ಮಾರಾಟಗಾರರಿಗೆ ಹೋಗಿವೆಯೇ ಎಂಬುದು ಅನುಮಾನಾಸ್ಪದವಾಗಿದೆ. ಕಾಟಾಚಾರದ ಅಂತರಾಷ್ಟ್ರೀಯ ಸಮ್ಮೇಳನ ಮಾಡಿ ಅನುದಾನ ದುರ್ಬಳಕೆ ಮಾಡಿಕೊಳ್ಳದೆ ಸಮಾಜದ ಸಂಘಟನೆಗಳನ್ನು ಪರಿಗಣನೆಗೆ ತೆಗೆದುಕೊಂಡು ಯಶಸ್ವಿಯಾಗಿ ಸಮ್ಮೇಳನ ಮಾಡಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅಥವಾ ಸಮಾಜ ಕಲ್ಯಾಣ ಇಲಾಖೆ ಮುಂದೆ ಧರಣಿ ಸತ್ಯಾಗ್ರಹ ನಡೆಸಲಾಗುವುದು. ಅದಕ್ಕೂ ಬಗ್ಗದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇದೇ ವೇಳೆ ಪೂಜ್ಯ ಭಂತೆ ಸಂಘಜ್ಯೋತಿ ಸೇರಿದಂತೆ ಇನ್ನಿತರ ಬೌದ್ಧ ಭಿಕ್ಕುಜಿಯವರು ಉಪಸ್ಥಿತರಿದ್ದರು

ಸುದ್ದಿ ಮತ್ತು ಜಾಹೀರಾತಿಗಾಗಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE